ಯುವ ಸ್ಫೂರ್ತಿ



ಯಾವುದನ್ನು ಬಯಸಬೇಡಿ. ನಮ್ಮನ್ನು ದುಃಖಕ್ಕೊಳಪಡಿಸುವ ಎಲ್ಲ ಕಷ್ಟಗಳಿಗೂ ಆಸೆಯೇ ಕಾರಣ.
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER – VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 193 | ಗುರುವಾರ : 15–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 193 | THURSDAY: 15–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಸಾಮಾಜಿಕ ಜಾಲತಾಣ ಬಳಕೆದಾರರಿಗೆ ಮೂಗುದಾರ : ಗೃಹಸಚಿವ ಪರಮೇಶ್ವರ್



**ಬೆಂಗಳೂರು,ಮೇ.15–** ಸಾಮಾಜಿಕ ಜಾಲತಾಣದಲ್ಲಿ ದೇಶವಿರೋಧಿ ಪೋಸ್ಟ್‌ಗಳನ್ನು ನಿರ್ಬಂಧಿಸುವ ಸಲುವಾಗಿ ವಿಸ್ತೃತವಾದ ಕಾರ್ಯಯೋಜನೆಯನ್ನು ರೂಪಿಸಲಾಗುತ್ತದೆ ಎಂದು ಗೃಹಸಚಿವ ಡಾ.ಜಿ. ಪರಮೇಶ್ವರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ಬಟನ್ ಒತ್ತಿದಾಕ್ಷಣ ಎಲ್ಲವನ್ನೂ ನಿಲ್ಲಿಸಲಾಗುವುದಿಲ್ಲ. ಪದ್ಧತಿಯ ಅನುಸಾರವೇ ಕ್ರಮ ಕೈಗೊಳ್ಳಬೇಕು. ಇದು ಸಣ್ಣ ವಿಚಾರವಲ್ಲ. ಮೇಲ್ನೋಟಕ್ಕೆ ಹೇಳಿದಷ್ಟು ಸರಳವಲ್ಲ ಎಂದರು.ವಿದೇಶದಲ್ಲಿ ಕುಳಿತು ಪೋಸ್ಟ್ ಮಾಡುತ್ತಾನೆ. ನಾವು ಇಲ್ಲಿ ಕಾನೂನು ಮಾಡಿದಾಕ್ಷಣ ವಿದೇಶದಲ್ಲಿರುವವರನ್ನು ನಿಂದಿಸುವುದು ಸರಿಬರುವುದಿಲ್ಲ. ಈಗಾಗಲೇ ಸೈಬರ್ ವಿಭಾಗದ ಪೊಲೀಸ್ ಮಹಾನಿರ್ದೇಶಕರು ಸೇರಿದಂತೆ ಎಲ್ಲರ ಜೊತೆ ಚರ್ಚೆ ಮಾಡಲಾಗಿದೆ. ನಾವು ಅಪರಾಧಗಳನ್ನು ಪತ್ತೆಹಚ್ಚಲು ಶುರು ಮಾಡಿದಂತೆ ಪ್ರಕರಣಗಳ ಸಂಖ್ಯೆ ಕೂಡ ಹೆಚ್ಚಾಗುತ್ತದೆ. ನಮಗೆ ಸಂಖ್ಯೆ ಮುಖ್ಯವಲ್ಲ. ಇಂತಹುದನ್ನು ನಿಲ್ಲಿಸಬೇಕು ಎಂದರು.

ಅವಹೇಳನ, ಕೋಮುದ್ವೇಷ, ವೈಯಕ್ತಿಕ ಟೀಕೆಗಳಿಗೆ ಸಾಮಾಜಿಕ ಜಾಲತಾಣದಲ್ಲಿ ಕಡಿವಾಣ ಹಾಕಲು ತಯಾರಿ ಮಾಡಿಕೊಳ್ಳುತ್ತಿದ್ದೇವೆ ಎಂದರು.ಮಂಗಳೂರಿನ ಸುಹಾಸ್‌ಶೆಟ್ಟಿ ಪ್ರಕರಣವನ್ನು ಎನ್‌ಐಎಗೆ ನೀಡುವ ಅಗತ್ಯವಿಲ್ಲ. ಆದರೆ ರಾಜ್ಯಪಾಲರು ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೋ ನಮಗೆ ಗೊತ್ತಿಲ್ಲ ಎಂದರು.

ಕರಾವಳಿಯ ಉಡುಪಿ, ದ.ಕನ್ನಡ ಜಿಲ್ಲೆಗಳಲ್ಲಿ ಕೋಮು ಚಟುವಟಿಕೆಗಳನ್ನು ನಿಗ್ರಹಿಸಲು ಎಎನ್‌ಎಫ್ ಮಾದರಿಯಲ್ಲಿ ವಿಶೇಷ ಪಡೆ ರಚನೆಗೆ ಪ್ರಸ್ತಾವನೆ ಬಂದಿದೆ. ಚರ್ಚೆ ಮಾಡಿ 2–3 ದಿನಗಳಲ್ಲಿ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದರು. ಬಿಜೆಪಿಯವರು ಪ್ರಸ್ತಾವನೆ ಕಳುಹಿಸಿರುವುದು ಇಂದು ಬೆಳಿಗ್ಗೆ ನಮಗೆ ತಲುಪಿದೆ ಎಂದು ಸ್ಪಷ್ಟಪಡಿಸಿದರು.


ರಾಜ್ಯಸರ್ಕಾರ ಹೊಸದಾಗಿ ಯಾವುದೇ ಗ್ಯಾರಂಟಿ ಮಾಡುವುದಿಲ್ಲ. ಇರುವ ಗ್ಯಾರಂಟಿಗಳನ್ನೆ ಸಮರ್ಪಕವಾಗಿ ಅನುಷ್ಠಾನಕ್ಕೆ ತರುತ್ತೇವೆ ಎಂದು ಹೇಳಿದರು.ದೇಶದ ಸಾರ್ವಭೌಮತ್ವ ಮತ್ತು

2ನೇ ಪುಟಕ್ಕೆ

## ಇಂದು ಸಿಂಧನೂರು–ರಾಯಚೂರು ಹೊಸ ರೈಲು ಮಾರ್ಗಕ್ಕೆ ಶಂಕುಸ್ಥಾಪನೆ

ಯುವ ಮಾರ್ಗ ಸುದ್ದಿ

ರಾಯಚೂರು,ಮೇ.15– ನೈರುತ್ಯ ರೈಲ್ವೆ ವಿಭಾಗದಿಂದ ಮುನಿರಾಬಾದ್ (ಗಿಣಿಗೇರಾ)–ರಾಯಚೂರ ಹೊಸ ರೈಲು ಮಾರ್ಗದ ಯೋಜನೆಯಡಿ ಸಿಂಧನೂರು–ರಾಯಚೂರು ನಡುವೆ 81 ಕಿ.ಮೀ ನೂತನ ರೈಲು ಮಾರ್ಗ ನಿರ್ಮಾಣದ ಶಂಕುಸ್ಥಾಪನೆ ಕಾರ್ಯಕ್ರಮವು ಮೇ 15 ರಂದು ಮಧ್ಯಾಹ್ನ 2 ಗಂಟೆಗೆ ರಾಯಚೂರ ಜಿಲ್ಲೆಯ ಸಿಂಧನೂರು ರೈಲ್ವೆ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಭಾರತ ಸರ್ಕಾರದ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ.ಸೋಮಣ್ಣ ಹಾಗೂ ರಾಜ್ಯ ಸರ್ಕಾರದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಡಾ. ಎಂ. ಬಿ. ಪಾಟೀಲ್ ಅವರು ಉದ್ಘಾಟಿಸಲಿದ್ದಾರೆ.




ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು,


ಮಾನ್ಯ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಘನ ಉಪಸ್ಥಿತಿ ವಹಿಸುವರು.

2ನೇ ಪುಟಕ್ಕೆ

## ಅನ್ನಭಾಗ್ಯ ಯೋಜನೆ; ಹಣದ ಬದಲಿಗೆ ಅಕ್ಕಿ ವಿತರಣೆ

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.15–** ಇಲ್ಲಿನ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ಮೇ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಹಾಗೂ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಜಿಲ್ಲೆಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ 2025ರ ಫೆಬ್ರವರಿ ಮಾಹೆಯಿಂದ ಜಾರಿ ಬರುವಂತೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.



ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ, ಹಾಗೂ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿಯೊಂದಿಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು.

ಸರ್ಕಾರದ ಮಾರ್ಗಸೂಚಿಯಂತೆ ಏಕ–ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ (ಎಎವೈ) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

2ನೇ ಪುಟಕ್ಕೆ

## ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗೆ ಆಗ್ರಹಿಸಿ ಪ್ರತಿಭಟನೆ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.15–** ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗೆ ಆಗ್ರಹಿಸಿ ಏಮ್ಸ್ ಹೋರಾಟ ಸಮಿತಿ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ಜಂಟಿಯಾಗಿ ಪ್ರತಿಭಟನೆ ನಡೆಸಿ ಸಹಾಯಕ ಆಯುಕ್ತರ ಮೂಲಕ ಪ್ರಧಾನಿ ಮಂತ್ರಿ ನರೇಂದ್ರ ಮೋದಿಯವರಿಗೆ ಮನವಿ ಸಲ್ಲಿಸಿದರು.




ರಾಜ್ಯದಲ್ಲಿ ಅತ್ಯಂತ ಹಿಂದುಳಿದ ಜಿಲ್ಲೆಯಾದ ರಾಯಚೂರು ಪಟ್ಟಣದಲ್ಲಿ ಅಖಿಲ ಭಾರತ ವೈದ್ಯಕೀಯ ಸಂಸ್ಥೆ (ಏಮ್ಸ್) ಸ್ಥಾಪಿಸಲು ಕಳೆದ ಮೂರು ವರ್ಷಗಳಿಂದ ನಿರಂತರವಾಗಿ ಹೋರಾಟ ನಡೆಸಿದ್ದು ಹೋರಾಟ ನಾಲ್ಕನೆ ವರ್ಷಕ್ಕೆ ಪಾದಾರ್ಪಣೆ ಮಾಡಿದ್ದು ಏಮ್ಸ್ ಸ್ಥಾಪನೆಗೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಪತ್ರಗಳು ಬರೆದಿದೆ. ಆದರೆ ಕೇಂದ್ರ ಸರ್ಕಾರ ಹೋರಾಟಕ್ಕೆ ಸ್ಪಂದಿಸದಿರುವುದ ದುರದೃಷ್ಟಕರ. ಜಿಲ್ಲೆಯಲ್ಲಿ ಏಮ್ಸ್ ಸ್ಥಾಪನೆಯಾಗುವವರೆಗೂ ನಮ್ಮ ಹೋರಾಟ ನಿರಂತರವಾಗಿರುತ್ತದೆ. ಕಾರಣ ಮನವಿಯನ್ನು ಪರಿಶೀಲಿಸಿ ರಾಯಚೂರು ಪಟ್ಟಣದಲ್ಲಿ ಏಮ್ಸ್ ಸಂಸ್ಥೆ ಸ್ಥಾಪಿಸನೆಗೆ ಮುಂದಾಗಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಏಮ್ಸ ಹೋರಾಟ ಸಮಿತಿ ಮುಖಂಡರಾದ ಡಿ.ಬಿ.ಸೋಮನಮರಡಿ, ಎಸ್.ಎಮ್ ಕಾಡ್ಲೂರು, ಮಲ್ಲನಗೌಡ ಪಾಟೀಲ ರಾಂಪೂರ, ಅಮರೇಶ ಗುಂಡಸಾಗರ, ರಾಜಸ್ವಾಮಿ, ಯಂಕಪ್ಪ ಚಿತ್ತಾಪೂರ, ಭೋದು ಸ್ವಾಮಿ, ರಮೇಶ ಗುತ್ತೆದಾರ, ನಾಗರಾಜ ಹಾಲಭಾವಿ. ಯಮನಪ್ಪ ಸಜಾರ್ಪೂರ, ಸೋಮಪ್ಪ, ಬಸನಗೌಡ ಮಾಲಿಪಾಟೀಲ, ವೆಂಕಟೇಶ ನವಲಿ, ದೇವಪ್ಪ, ರಾಜು ಹಾಗೂ ಕೆಆರ್‌ಎಸ್ ಮುಖಂಡರು, ರೈತ ಸಂಘ, ದಲಿತ ಸಂಘಟನೆ ಸೇರಿದಂತೆ ಇನ್ನಿತರರು ಮುಖಂಡರು ಇದ್ದರು.

## ವರದಕ್ಷಿಣೆ ಕಿರುಕುಳ ಮಹಿಳಾ ಸಾವು: ಆರೋಪಿಗಳ ಬಂಧನಕ್ಕೆ ಒತ್ತಾಯ




ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.15–**ವರದಕ್ಷಿಣೆ ಕಿರುಕುಳದಿಂದ ಮರಣ ಹೊಂದಿದ ಶಾಂತಲಾ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡಲು ವಿಫಲವಾದ ಪೊಲೀಸ್ ಇಲಾಖೆ ಆರೋಪಿಗಳ ರಕ್ಷಣೆಗೆ ನಿಂತಿದೆ ಎಂದು ಆರೋಪಿಸಿ ಡಿವೈಎಫ್‌ಐ, ಸಿಐಟಿಯು ಹಾಗೂ ಪ್ರಗತಿಪರ ಸಂಘಟನೆಗಳ ಪ್ರತಿಭಟನೆ ಮಾಡಿ ಸಹಾಯಕ ಆಯುಕ್ತರ ಮೂಲಕ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು.

ಮಗಳನ್ನು ನಿರಂತರವಾಗಿ ದೈಹಿಕವಾಗಿ ಹಾಗೂ ಮಾನಸಿಕ ಕಿರುಕುಳ ನೀಡುತ್ತಿದ್ದರು ಅಲ್ಲದೇ ಮಕ್ಕಳಾಗದಿರುವ ನೀನು ಗೊಡ್ಡು ಎಂದು ಹಿಯ್ಯಾಳಿಸಿ ಕೊಲೆ ಮಾಡಿರುವ ಆರೋಪಿಗಳಾದ ಸುನೀಲ್ ಹಾಗೂ ಅವರ ಕುಟುಂಬದ ವಿರುದ್ಧ ದಶರಥ ಎಂಬುವರು ದೂರು ಸಲ್ಲಿಸಿದ್ದರು ಲಿಂಗ ಸುಗೂರು ಪೊಲೀಸರು ಆ ರೋಪಿಗಳನ್ನು ಬಂಧಿಸುವಲ್ಲಿ ವಿಫಲರಾಗಿದ್ದಾರೆ.

ಕಾರಣ ಆರೋಪಿಗಳನ್ನು ಬಂಧಿಸಬೇಕು ಹಾಗೂ ಆರೋಪಿಗಳ ರಕ್ಷಣೆಗೆ ನಿಂತಿರುವ ಪೊಲೀಸ್ ಇಲಾಖೆ ಸಿಬ್ಬಂದಿ ಗಳನ್ನು ಅಮಾನತ್ತು ಮಾಡಬೇಕೆಂಬ ಮನವಿಯನ್ನು ಸಲ್ಲಿಸಿದರು.ಈ ಸಂದರ್ಭದಲ್ಲಿ ಎಸ್‌ಎಫ್‌ಐ ಜಿಲ್ಲಾಧ್ಯಕ್ಷ ರಮೇಶ ವೀರಾಪೂರು, ತಾಲೂಕು ಅಧ್ಯಕ್ಷ ವನಜಾಕ್ಷಿ, ನಿಂಗಪ್ಪ, ಅಪ್ಪಣ್ಣ ಕಾಂಬಳೆ, ದಶರಥ, ಆಂಜಿನೇಯ, ಶಂಶುದ್ದೀನ್, ತುಕಾರಂಗೋದಳಿ, ಶಂಕರ, ಕೃಷ್ಣಗೋದಳಿ, ನಾಮದೇವ ಗೋದಳಿ,ದೇವು ಸಿಂದೆ, ಹನುಮಂತನಾಗಲಾಪೂರು ಇದ್ದರು

## 6ನೇ ತರಗತಿ ಅರ್ಹತಾ ಪರೀಕ್ಷೆ ಸುಸೂತ್ರ



ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.15–**ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗೆ ದಾಖಲು ಮಾಡಿಕೊಳ್ಳುವ ಯೋಜನೆಯಡಿ 2025–26ನೇ ಸಾಲಿನ 6ನೇ ತರಗತಿ ಅರ್ಹತಾ ಪರೀಕ್ಷೆಯು ಮೇ 14ರಂದು ಮಂಗಳವಾರ ಸುಸೂತ್ರವಾಗಿ ನಡೆಯಿತು.

ಈ ವೇಳೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಚಿದಾನಂದ ಅವರು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

ರಾಯಚೂರು ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಪರೀಕ್ಷೆಗೆ ಒಟ್ಟು 310 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 262 ವಿದ್ಯಾರ್ಥಿಗಳು ಪರೀಕ್ಷೆ

2ನೇ ಪುಟಕ್ಕೆ

## ಹೈದ್ರಾಬಾದ್ ಕರ್ನಾಟಕ ವಿದ್ಯಾರ್ಥಿ ಒಕ್ಕೂಟದಿಂದ ಪ್ರತಿಭಾ ಪುರಸ್ಕಾರ ಸಮಾರಂಭ




ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.15–** ಹೈದ್ರಾಬಾದ್ ಕರ್ನಾಟಕ ವಿದ್ಯಾರ್ಥಿ ಒಕ್ಕೂಟ ಮತ್ತು ಸಮಾನ ಮನಸ್ಕಾರ ವೇದಿಕೆ ಜಂಟಿಯಾಗಿ ತಾಲೂಕಿನ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ 90ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ವಿಶಿಷ್ಟ ಸಾಧನೆ ಮಾಡಿದ ಗಣ್ಯರಿಗೆ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಒಕ್ಕೂಟದ ಸಂಚಾಲಕರಾದ ಯಲ್ಲಪ್ಪ ಬಾದರದಿನ್ನಿ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಪಟ್ಟಣದ ಸಿಂಧನೂರು ರಸ್ತೆಯಲ್ಲಿರುವ ಧ್ಯಾನ ಮಂದಿರದಲ್ಲಿ ಜೂನ್ 4 ರಂದು ಈ ಕಾರ್ಯಕ್ರಮ ನಡೆಯಲಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಚಲನಚಿತ್ರ ನಟ ಹಾಗೂ ಪ್ರಗತಿಪರ ಚಿಂತಕ ಚೇತನ ಅಹಿಂಸಾ ಮತ್ತು ಶಾಸಕರು, ಸಂಸದರು, ಸಚಿವರು ಸೇರಿದಂತೆ ಹಲವು ಗಣ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮೇ 30 ರೊಳಗೆ ತಮ್ಮ ಹೆಸರುಗಳನ್ನು ನೋಂದಾಯಿಸಿ ಕೊಳ್ಳಲು ಮಲ್ಲೇಶ ಮಾಚನೂರು ವಕೀಲರು, ಹನಮಂತ ಬ್ಯಾಗವಾಟ್, ಹನುಮೇಶ ಜೀನೂರು, ದತ್ತಾತ್ರೇಯ ವಕೀಲರು ಅವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

## ಮೊದಲನೇಯ ಪುಟದಿಂದ

# ಇಂದು ಸಿಂಧನೂರು–ರಾಯಚೂರು ಹೊಸ ರೈಲು ಮಾರ್ಗಕ್ಕೆ ಶಂಕುಸ್ಥಾಪನೆ

**ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಚಂದ್ರಶೇಖರ್ ಬಿ.ಪಾಟೀಲ್, ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ ಅವರು ಗೌರವಾನ್ವಿತ ಅತಿಥಿಗಳಾಗಿ ಉಪಸ್ಥಿತರಿರುವರು ಎಂದು ನೈರುತ್ಯ ರೈಲ್ವೆಯ ಹುಬ್ಬಳ್ಳಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

# ಸಾಮಾಜಿಕ ಜಾಲತಾಣ ಬಳಕೆದಾರರಿಗೆ ಮೂಗುದಾರ: ಗೃಹಸಚಿವ ಪರಮೇಶ್ವರ್

ಐಕ್ಯತೆಯಲ್ಲಿ ಯಾವುದೇ ರಾಜಿ ಇಲ್ಲ. ಪ್ರತಿಯೊಬ್ಬ ಭಾರತೀಯ ಪ್ರಜೆಗೂ ತನ್ನದೇ ಆದ ಭಿನ್ನ ಆಲೋಚನೆಗಳಿರುತ್ತವೆ. ಆದರೆ ದೇಶದ ವಿಷಯ ಬಂದಾಗ ಎಲ್ಲರೂ ಒಟ್ಟಾಗಿ ಸಹಕರಿಸುವ ಅಗತ್ಯವಿದೆ.

ಹೀಗಾಗಿ ನಮ ಭಾರತೀಯ ಯೋಧರು ನಡೆಸಿದ ಸಿಂಧೂರ್ ಕಾರ್ಯಾಚರಣೆಗೆ ಬೆಂಬಲವಾಗಿ ಕಾಂಗ್ರೆಸ್‌ನಿಂದ ಬೆಂಗಳೂರಿನಲ್ಲಿ ತಿರಂಗಾ ಯಾತ್ರೆ ನಡೆಸಲಾಯಿತು. ಅದಕ್ಕೆ ಎಲ್ಲಾ ಪಕ್ಷದವರನ್ನೂ ಆಹ್ವಾನಿಸಿದ್ದೇವೆ. ಬಿಜೆಪಿಯವರೇ ಮೊದಲು ಈ ರೀತಿಯ ಯಾತ್ರೆ ಮಾಡಿದ್ದರೆ ನಾವೂ ಭಾಗವಹಿಸುತ್ತಿದ್ದೆವು ಮತ್ತು ಅದಕ್ಕೆ ಸಹಕಾರ ನೀಡುತ್ತಿದ್ದೆವು. ಈಗ ಅವರು ಪ್ರತ್ಯೇಕವಾಗಿ ಮಾಡುತ್ತಿದ್ದಾರೆ. ನಮ ಆಕ್ಷೇಪಣೆಯಿಲ್ಲ ಎಂದರು.

ಕೇಂದ್ರ ಸರ್ಕಾರದ ಮುನ್ಸೂಚನೆ ಪ್ರಕಾರ, ತುರ್ತು ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಭೆ ನಡೆಯುತ್ತಿತ್ತು. ಆಗ ಕದನ ವಿರಾಮದ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ ಟ್ರಂಪ್ ಟ್ವಿಟ್ ಬಂದಿತ್ತು. ನಮ ದೇಶದ ಆಂತರಿಕ ವಿಚಾರಕ್ಕೆ ಸಂಬಂಧಪಟ್ಟಂತೆ ಅಮೆರಿಕದ ಅಧ್ಯಕ್ಷರು ಹೇಗೆ ಟ್ವಿಟ್ ಮಾಡಲು ಸಾಧ್ಯ ಎಂದು ನಾವು ಅಪನಂಬಿಕೆಯಿಂದಲೇ ಸಭೆ ಮುಂದುವರೆಸಿದ್ದೆವು. ಅರ್ಧಗಂಟೆಯ ಒಳಗೆ ಕೇಂದ್ರ ರಕ್ಷಣಾ ಕಾರ್ಯದರ್ಶಿಗಳು ಕರೆ ಮಾಡಿ ಕದನ ವಿರಾಮವಾಗಿದೆ. ಅಮೆರಿಕ ಮಧ್ಯಸ್ಥಿಕೆ ವಹಿಸಿದೆ ಎಂದು ಹೇಳಿದರು. ಇದು ದೇಶದ ರಕ್ಷಣೆ ಪ್ರಶ್ನೆ.

ಯಾವುದೇ ರೀತಿಯ ಬೆಳವಣಿಗೆಗಳಾದರೂ ಅದನ್ನು ನಮ ಪ್ರಧಾನಿ ತಿಳಿಸುವುದು ಒಳ್ಳೆಯದು. ಬೇರೆಯವರು ಹಸ್ತಕ್ಷೇಪ ಮಾಡುವುದು ಸರಿಯಲ್ಲ ಎಂದರು.ಹಿಂದುಳಿದ ವರ್ಗಗಳ ಆಯೋಗದ ಬಗ್ಗೆ ನಡೆಸಲಾಗಿರುವ ಜಾತಿಜನಗಣತಿ ಬಗ್ಗೆ ಸಂಪುಟದಲ್ಲಿ ಚರ್ಚೆಯಾಗಿಲ್ಲ. ಎಲ್ಲಾ ಸಚಿವರು ಲಿಖಿತ ಅಭಿಪ್ರಾಯಗಳನ್ನು ತಿಳಿಸುತ್ತಿದ್ದಾರೆ. 11 ಜನ ಅಭಿಪ್ರಾಯ ತಿಳಿಸಿದ್ದಾರೆ ಎಂದು ಹೇಳುತ್ತಿರುವುದನ್ನು ನಾನು ಕೇಳಿದ್ದೇನೆ. ಉಳಿದವರು ಹಂತಹಂತವಾಗಿ ಅಭಿಪ್ರಾಯಪಡುತ್ತಾರೆ ಎಂದು ತಿಳಿಸಿದರು.

ಪರಿಶಿಷ್ಟ ಜಾತಿಗಳಲ್ಲಿನ ಒಳಮೀಸಲಾತಿಗೆ ಸಮೀಕ್ಷೆಗಳು ಉತ್ತಮವಾಗಿ ನಡೆಯುತ್ತಿವೆ. ಅಗತ್ಯವಾದರೆ ಕಾಲಾವಧಿಯನ್ನು ವಿಸ್ತರಣೆ ಮಾಡುವ ಬಗ್ಗೆ ಆಯೋಗ ತೀರ್ಮಾನ ತೆಗೆದುಕೊಳ್ಳುತ್ತದೆ. ಗ್ರಾಮೀಣ ಭಾಗದಲ್ಲಿ ನಮ ಮನೆಗೂ ಬಂದು ಸಮೀಕ್ಷೆ ಮಾಡಿದ್ದಾರೆ. ನಗರ ಪ್ರದೇಶದಲ್ಲಿ ಕಡಿಮೆ ಇರಬಹುದು ಎಂದು ಹೇಳಿದರು.

# ಅನ್ನಭಾಗ್ಯ ಯೋಜನೆ; ಹಣದ ಬದಲಿಗೆ ಅಕ್ಕಿ ವಿತರಣೆ

ಮೇ 2025ರ ಮಾಹೆಯಲ್ಲಿ 01 ರಿಂದ 03 ಸದಸ್ಯರಿರುವ ಅಂತ್ಯೋದಯ (ಎಎವೈ) ಪಡಿತರದಾರರಿಗೆ 35 ಕೆ.ಜಿ ಅಕ್ಕಿ, 04 ಸದಸ್ಯರ ಕಾರ್ಡಿಗೆ 40 ಕೆ.ಜಿ, 05 ಸದಸ್ಯರಿರುವ ಕಾರ್ಡಿಗೆ 50 ಕೆ.ಜಿ ಅಕ್ಕಿ, 06 ಸದಸ್ಯರಿರುವ ಕಾರ್ಡಿಗೆ 60 ಕೆ.ಜಿ ಅಕ್ಕಿ, 07 ಸದಸ್ಯರಿರುವ ಕಾರ್ಡಿಗೆ 70 ಕೆ.ಜಿ ಅಕ್ಕಿ, 08 ಸದಸ್ಯರಿರುವ ಕಾರ್ಡಿಗೆ 80 ಕೆ.ಜಿ ಅಕ್ಕಿ, 09 ಸದಸ್ಯರಿರುವ ಕಾರ್ಡಿಗೆ 90 ಕೆ.ಜಿ ಅಕ್ಕಿ, 10 ಸದಸ್ಯರಿರುವ ಕಾರ್ಡಿಗೆ 100 ಕೆ.ಜಿ ಅಕ್ಕಿ, 11 ಸದಸ್ಯರಿರುವ ಕಾರ್ಡಿಗೆ 110 ಕೆ.ಜಿ ಅಕ್ಕಿ, 12 ಸದಸ್ಯರಿರುವ ಕಾರ್ಡಿಗೆ 120 ಕೆ.ಜಿ ಅಕ್ಕಿ, 13 ಸದಸ್ಯರಿರುವ ಕಾರ್ಡಿಗೆ 130 ಕೆ.ಜಿ ಅಕ್ಕಿ, 14 ಸದಸ್ಯರಿರುವ ಕಾರ್ಡಿಗೆ 140 ಕೆ.ಜಿ ಅಕ್ಕಿ ಮತ್ತು 15 ಸದಸ್ಯರಿರುವ ಕಾರ್ಡಿಗೆ 150 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಅದೇ ರೀತಿಯಾಗಿ ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿಯೊಬ್ಬ ಸದಸ್ಯರಿಗೆ 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಡಲಾಗುತ್ತಿದ್ದು, ಅರ್ಹ ಪಡಿತರ ಚೀಟಿದಾರರು ಇದರ ಸದುಪಯೋಗ ಪಡೆದುಕೊಳ್ಳಲು ತಿಳಿಸಿದೆ.

ಒಂದು ರಾಷ್ಟೀಯ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆ ಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ದೂರವಾಣಿ ಸಂಖ್ಯೆ: 1967ಗೆ ಅಥವಾ ಆಯಾ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪ ನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 6ನೇ ತರಗತಿ ಅರ್ಹತಾ ಪರೀಕ್ಷೆ ಸುಸೂತ್ರ

ಹಾಜರಾಗಿದ್ದು, 48 ವಿದ್ಯಾರ್ಥಿಗಳ ಗೈರು ಆಗಿದ್ದರು. ಒಟ್ಟು 13 ಕೊಠಡಿಗಳಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ರಾಜೇಂದ್ರ ಜಲ್ದಾರ್, ಡಯಟ್ ಕಾಲೇಜಿನ ಹಿರಿಯ ಉಪನ್ಯಾಸಕಿಯಾದ ಶಿವಮ್ಮ ಸೇರಿದಂತೆ ವಿವಿಧ ಅಧಿಕಾರಿಗಳು ಇದ್ದರು.

# ರಾಯಚೂರಿಗೆ ಏಮ್ಸ್ ಸಂಸ್ಥೆಯನ್ನು ಸ್ಥಾಪನೆ ಮಾಡಬೇಕು: ಶರಣಕುಮಾರ ಮುದ್ದಮಗುಂಡಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಮೇ.15–** ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿ ಏಮ್ಸ್ ಹೋರಾಟ ಸಮಿತಿ ವತಿಯಿಂದ ಪ್ರಧಾನಗಳಿಗೆ ಉಪತಹಸೀಲ್ದಾರ್ ಮಲ್ಲಿಕಾರ್ಜುನ ರವರ ಮೂಲಕ ಮನವಿ ಸಲ್ಲಿಸಿ ಏಮ್ಸ್ ಹೋರಾಟ ಸಮಿತಿಯ ಸಂಚಾಲಕರಾದ ಶರಣಕುಮಾರ ಮುದ್ದಮಗುಂಡಿ ಮಾನವಿ ಸಲ್ಲಿಸಿ ಮಾತನಾಡಿ ರಾಯಚೂರಿನಲ್ಲಿ ಏಮ್ಸ್ ವೈದ್ಯಕೀಯ ಸಂಸ್ಥೆಯನ್ನು ಸ್ಥಾಪನೆ ಮಾಡುವಂತೆ ಒತ್ತಾಯಿಸಿ 3ವರ್ಷ ಪೂರ್ಣಗೊಂಡು 4 ನೇ ವರ್ಷಕ್ಕೆ ಕಾಲಿಟ್ಟಿದ್ದು ನಿರಂತರವಾಗಿ ಹೋರಾಟ



ನಡೆಸುತ್ತಿದ್ದರು ಕೂಡ ಕೇಂದ್ರ ಸರ್ಕಾರ ಸ್ಪಂದಿಸುತ್ತಿಲ್ಲ ಐ.ಐ.ಟಿ ಸೇರಿದಂತೆ ಈ ಭಾಗಕ್ಕೆ ಮಂಜೂರಾದ ಅನೇಕ ಯೋಜನೆಗಳು ಹುಬ್ಬಳಿ, ಧಾರವಾಡ ಜಿಲ್ಲೇಗಳಿಗೆ ಹೋಗಿದ್ದು ಅತ್ಯಂತ ಹಿಂದುಳಿದಿರುವ ರಾಯಚೂರಿಗೆ ನಿರಂತರವಾಗಿ ಆನ್ಯಾಯವಾಗುತ್ತಿರುವುದರಿಂದ ಕೇಂದ್ರ ಸರ್ಕಾರ ಕೂಡಲೇ ಪರಿಶೀಲಿಸಿ ಏಮ್ಸ್ ಸಂಸ್ಥೆಯನ್ನು ಸ್ಥಾಪನೆ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ದೇವಪುತ್ರ ಮುದ್ದಮಗುಂಡಿ, ಗುಂಡಪ್ಪ ಮುದ್ದಮಗುಂಡಿ,ಶ್ರೀಕಾಂತ ತಡಕಲ್,ಶಿವರಾಜ್ ದಿನ್ನಿ, ಗುರು ವಲ್ಕಂದಿನ್ನಿ,ಬಸವರಾಜ ,ರವಿಚಂದ್ರ,ಹಂಪಯ್ಯ,ಬಾಲಸ್ವಾಮಿ,ಸೇರಿದಂತೆ ಇನ್ನಿತರರು ಇದ್ದರು.

# ಶಿರಪೂರ ನೀರಾವರಿ ಹೆಸರಿನಲ್ಲಿ 20 ಕೋಟಿ ಭ್ರಷ್ಟಾಚಾರದ ಆರೋಪ

**ಕಲಬುರಗಿ,ಮೇ.15–** ಜಿಲ್ಲೆಯ ಆಳಂದ ತಾಲೂಕಿನ ವಿವಿಧ ಗ್ರಾಮಗಳಾದ ಸರಸಂಬಾ, ನಾಗಲೇಗಾಂವ, ಸಕ್ಕರಗಾ, ಅಂಬೇವಾಡ, ಕಿಣಿ ಅಬ್ಬಾಸ, ಚಿಂಚೋಳಿ (ಕೆ), ಚಿಂಚೋಳಿ (ಬಿ) ಮತ್ತು ಸಾವಳೇಶ್ವರ ಗ್ರಾಮಗಳಲ್ಲಿ ಶಿರಪೂರ ಮಾದರಿಯ ನಾಲಾ ಹೂಳೆತ್ತುವುದು ಮತ್ತು ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಗಳಲ್ಲಿ ಭಾರೀ ಅವ್ಯವಹಾರ ನಡೆಯುತ್ತಿದ್ದು ಗುತ್ತಿಗೆದಾರರು ಮತ್ತು ಇಂಜಿನಿಯರರು ಸೇರಿಕೊಂಡು ರೂ. 200000000 ಕೋಟಿ ಲೂಟಿ ಮಾಡುತ್ತಿರುವುದನ್ನು ಕೂಡಲೇ ತಡೆ ಹಿಡಿದು ಸರಕಾರದ ನಿಯಮಗಳ ಪ್ರಕಾರ ತನಿಖೆ ಮಾಡುವಂತೆ ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ ಆಗ್ರಹಿಸಿದ್ದಾರೆ.




ಕಲಬುರಗಿಯ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಆಳಂದ ತಾಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರಾಗಿರುವ ಕಾಮಗಾರಿಗಳಾದ ಇಂಡೆಂಟ್ ನಂ. 1614– ಆಳಂದ ತಾಲೂಕಿನ ಸರಸಂಬಾ ಮತ್ತು ನಾಗಲೇಗಾಂವ ಗ್ರಾಮಗಳ ಹತ್ತಿರದ ನಾಲಾ ಹೂಳೆತ್ತುವುದು ಮತ್ತು ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಯು ಸಂಪೂರ್ಣ ಕಳಪೆ ಮಟ್ಟದಾಗಿದ್ದು ಸರ್ಕಾರದ ನಿಯಮಗಳ ಪ್ರಕಾರ ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಮಾಡಿರುವುದಿಲ್ಲ. ನಾಲಾ ಹೂಳೆತ್ತುವ ಕಾಮಗಾರಿಯು ಆಳ ಮತ್ತು ಅಗಲ ವಿಸ್ತೀರ್ಣ ಸುಳ್ಳು ದಾಖಲೆಗಳನ್ನು ತಯಾರಿಸಿ 98000000 ಕೋಟಿ ಲೂಟಿ ಮಾಡುತ್ತಿರುವುದನ್ನು ಕೂಡಲೇ ತಡೆ ಹಿಡಿಯಬೇಕು. ಸುಳ್ಳು ಲೆಕ್ಕ ಬರೆದಿರುವ ಅಧಿಕಾರಿಗಳ ಮೇಲೆ ಕ್ರಿಮಿನಲ್ ಮೊಕದ್ದಮ್ಮೆ ಹೂಡಬೇಕು. ಕಂದಾಯ ಇಲಾಖೆಯಿಂದ ಮಾಹಿತಿ ತರಿಸಿಕೊಳ್ಳಬೇಕು. ಸರಸಂಬಾ ಮತ್ತು ನಾಗಲೇಗಾಂವ ಗ್ರಾಮಗಳಲ್ಲಿ ಎಷ್ಟು ಕೀಲೋ ಮೀಟರ್ ನಾಲಾ ಇದೆ ಎನ್ನುದನ್ನು ಮೊದಲು ಪತ್ತೆ ಹಚ್ಚಬೇಕು ಎಂದು ಒತ್ತಾಯಿಸಿದರು.

ಈ ಹಿಂದೆ ಶಿರಪೂರ ಮಾದರಿಯಂತೆ ಎಂದು ಹೇಳಿ 2000000 ಕೋಟಿ ರೂ.ಕಾಮಗಾರಿ ಮಾಡಿದ ಸ್ಥಳ ಯಾವುದು?. ಈಗ ಮಾಡುತ್ತಿರುವ ಸ್ಥಳ ಯಾವುದು?. ಈ ಹಿಂದಿನ ಲೆಕ್ಕ ತಪಾಸಣಾ ವರದಿ ( 2014–2015ರಲ್ಲಿ ಅಥವಾ 2016–2017ರಲ್ಲಿ) ತರಿಸಿಕೊಂಡು ಸ್ಥಳ ಪರಿಶೀಲಿಸಬೇಕು. ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಯು ಸಂಪೂರ್ಣ ಕಳಪೆ ಮಟ್ಟದಾಗಿ ನಿರ್ಮಿಸಿದ್ದು ಅಂದಾಜು ಪಟ್ಟಿಯಲ್ಲಿರುವಂತೆ ಸಾಮಗ್ರಿಗಳನ್ನು ಬಳಸಿರುವುದಿಲ್ಲ. ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ಸರ್ಕಾರದ ಹಣ ಲೂಟಿ ಮಾಡುತ್ತಿದ್ದಾರೆ ಎಂದು ದೂರಿದರು.

ಇಂಡೆಂಟ್ ನಂ. 1615– ಆಳಂದ ತಾಲೂಕಿನ ಚಿಂಚೋಳಿ(ಕೆ) ಮತ್ತು ಚಿಂಚೋಳಿ(ಬಿ) ಗ್ರಾಮಗಳ ಹತ್ತಿರದ ನಾಲಾ ಹೂಳೆತ್ತುವುದು ಮತ್ತು ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಯಲ್ಲಿ ಭಾರೀ ಅಕ್ರಮ ನಡೆದಿದ್ದು 2014–2015 ಮತ್ತು 2015–2016ನೇ ಸಾಲಿನಲ್ಲಿ ಇದೇ ಗ್ರಾಮಗಳ ಇದೇ ನಾಲಾಗಳಲ್ಲಿ ಇದೇ ರೀತಿಯ ಕಾಮಗಾರಿ ಮಾಡಿ ಸರ್ಕಾರದ 20 ಕೋ. ರೂ. ಎತ್ತಿ ಹಾಕಿರುತ್ತಾರೆ. ಈಗ ಮತ್ತೆ ಅದೇ ಗ್ರಾಮಗಳಲ್ಲಿ ಒಂದೇ ರೀತಿಯ ಕಾಮಗಾರಿ ಮಾಡುತ್ತಿರುವುದು ಸಂಶಯಕ್ಕೆ ಎಡೆ ಮಾಡಿಕೊಟ್ಟಿರುತ್ತದೆ. ಅಲ್ಲದೇ ಮನರೇಗಾ ಕ್ರಿಯಾಯೋಜನೆಯಗಳಲ್ಲಿಯೂ ಕೂಡಾ ಪಡಸಾವಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಚಿಂಚೋಳಿ(ಕೆ), ಚಿಂಚೋಳಿ(ಬಿ) ಗ್ರಾಮಗಳಲ್ಲಿ ಇದೇ ನಾಲಾಗಳ ಹೂಳೆತ್ತುವ ಕಾಮಗಾರಿಗಳು ಇರುತ್ತವೆ. ಹಾಗಾದರೆ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಮಾಡಿರುವ ಕಾಮಗಾರಿ ಯಾವುದು?. ಶಿರಪೂರ ಮಾದರಿಯಲ್ಲಿ ಮಾಡುತ್ತಿರುವ ಕಾಮಗಾರಿ ಯಾವುದು?. ಇಲ್ಲಿ ಭಾರೀ ಅಕ್ರಮ ನಡೆದಿರುವುದು ಕಂಡು ಬರುತ್ತದೆ ಎಂದು ಸಂಶಯ ವ್ಯಕ್ತಪಡಿಸಿದರು.

ಇಂಡೆಂಟ್ ನಂ. 1616– ಆಳಂದ ತಾಲೂಕಿನ ಕಿಣಿ ಅಬ್ಬಾಸ, ಸಕ್ಕರಗಾ ಮತ್ತು ಅಂಬೇವಾಡ ಗ್ರಾಮಗಳಲ್ಲಿ ಶಿರಪೂರ ಮಾದರಿಯ ಚೆಕ್ ಡ್ಯಾಮ್ ನಿರ್ಮಾಣ ಮತ್ತು ನಾಲಾ ಹೂಳೆತ್ತುವ ಕಾಮಗಾರಿಗಳಿಗಾಗಿ 5 ಕೋಟಿ 96 ಲಕ್ಷಗಳು ಮಂಜೂರು ಆಗಿರುತ್ತವೆ. ಮನರೇಗಾ ಯೋಜನೆ ಅಡಿಯಲ್ಲಿ ಪ್ರತಿ ವರ್ಷ ಪ್ರತಿ ಗ್ರಾಮಗಳಲ್ಲಿ ಸಾಮೂಹಿಕ ಕಾಮಗಾರಿ, ನಾಲಾ ಹೂಳೆತ್ತುವುದು ಮಂಜೂರು ಮಾಡಿದ್ದು ಕೂಲಿಕಾರರು ಕೆಲಸ ಮಾಡಿದ್ದಾರೆ ಸರ್ಕಾರ ಅವರಿಗೆ ಕೂಲಿ ಮೊತ್ತ ನೀಡಿರುತ್ತದೆ ಎನ್‌ಎಂಎಂಎಸ್ ಆ್ಯಪ್ ಮುಖಾಂತರ ಫೋಟೋಗಳು ತೆಗೆಯಲಾಗಿದೆ. ಇಲ್ಲಿ ಅಂಬೇವಾಡ ಮತ್ತು ಕಿಣಿ ಅಬ್ಬಾಸ್ ಗ್ರಾಮಗಳು ಸಾವಳೇಶ್ವರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುತ್ತವೆ. ಸಕ್ಕರಗಾ ಗ್ರಾಮವು ಸರಸಂಬಾ ಗ್ರಾಮ ಪಂಚಾಯತ ವ್ಯಾಪ್ತಿಗೆ ಬರುತ್ತದೆ. ಉದ್ಯೋಗ ಖಾತ್ರಿಯಲ್ಲಿ ಮಾಡಿದ ಚೆಕ್ ಡ್ಯಾಮ್ ಯಾವುದು?. ಉದ್ಯೋಗ ಖಾತ್ರಿಯಲ್ಲಿ ಹೂಳೆತ್ತಿದ ನಾಲಾ ಯಾವುದು?. ಕೃಷಿ ಇಲಾಖೆಯ ಜಲಾನಯನ ಕಾಮಗಾರಿಗಳಲ್ಲಿ ನಿರ್ಮಿಸಿದ ಚೆಕ್ ಡ್ಯಾಮ್‌ಗಳು ಯಾವುವು?. ಮತ್ತು ಪ್ರಸ್ತುತ ಶಿರಪೂರ ಮಾದರಿಯಲ್ಲಿ ನಾಲಾ ಹೂಳೆತ್ತುತ್ತಿರುವುದು ಯಾವುದು?. ಎಲ್ಲವೂ ಅನುಮಾನಕ್ಕೆ ಕಾರಣವಾಗಿವೆ ಎಂದು ಆರೋಪಿಸಿದರು.

ಕಿಣಿ ಅಬ್ಬಾಸ, ಸಕ್ಕರಗಾ ಮತ್ತು ಅಂಬೇವಾಡ ಗ್ರಾಮಗಳಲ್ಲಿ ಎಷ್ಟು ಕಿಲೋಮೀಟರ್ ನಾಲಾ ಇದೆ?. ಒಟ್ಟು ಆರು ಕೋಟಿಯಲ್ಲಿ ಎಷ್ಟು ಕಿಲೋಮೀಟರ್ ನಾಲಾ ಹೂಳೆತ್ತಲಾಗಿದೆ. ಎಷ್ಟು ಆಳವಾಗಿ ಹೂಳೆತ್ತಲಾಗಿದೆ?. ಎಲ್ಲವೂ ನಿಗೂಢವಾಗಿದೆ ಇದೊಂದು ಹಣ ಲೂಟಿ ಮಾಡುವ ತಂತ್ರವಾಗಿದೆ. 2014–15 ಮತ್ತು 2015–2016ನೇ ಸಾಲಿನಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು?. ಎಷ್ಟು ಕೀಲೋ ಮೀಟರ್ ಅದರಿಂದ ಹೆಚ್ಚಾದ ನೀರಾವರಿ ಕ್ಷೇತ್ರ ಎಷ್ಟು?. ಶಿರಪೂರ ಮಾದರಿ ಎಂದು ಖರ್ಚು ಮಾಡಿರುವ 20 ಕೋ. ಮೂಲ ಉದ್ದೇಶವೇನು?. ಈ ಪ್ರದೇಶಗಳಲ್ಲಿ ಶಿರಪೂರ ಮಾದರಿಯ ಕಾಮಗಾರಿಯಿಂದ ನೀರನ್ನು ಬಳಸಿಕೊಂಡು ಕೃಷಿ ಮಾಡಿ ಆರ್ಥಿಕವಾಗಿ ಬಲಾಢ್ಯರಾದ ಈ ಭಾಗಗಳ ರೈತರ ಹೆಸರುಗಳನ್ನು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಇಂಡೆಂಟ್ ನಂ. 1722– ಆಳಂದ ತಾಲೂಕಿನ ಸಾವಳೇಶ್ವರ ಗ್ರಾಮದಲ್ಲಿ ಶಿರಪೂರ ಮಾದರಿಯಲ್ಲಿ ಚೆಕ್ ಡ್ಯಾಮ್ ನಿರ್ಮಾಣ ಮತ್ತು ಸಾವಳೇಶ್ವರ ಗ್ರಾಮದ ಹತ್ತಿರವಿರುವ ನಾಲಾ ಹೂಳೆತ್ತುವ ಕಾಮಗಾರಿಗಾಗಿ ರೂಪಾಯಿ 1 ಕೋಟಿ 77 ಲಕ್ಷ ಮಂಜೂರಾಗಿರುತ್ತದೆ. ಆದರೆ ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಮಾಡಿರುವುದಿಲ್ಲ. ಆದರೆ ಸುಳ್ಳು ಲೆಕ್ಕ ತೋರಿಸಿ ಶಾಸಕರ ಅಣ್ಣನ ಮಗನಾದ ಆರ್ ಕೆ ಪಾಟೀಲ ಬೋಗಸ್ ಬಿಲ್ಲುಗಳನ್ನು ತಯಾರಿಸಿ ರೂಪಾಯಿ 20 ಕೋಟಿಗಳನ್ನು ಲೂಟಿ ಮಾಡಿರುತ್ತಾರೆ. ಇದೇ ಕಾಮಗಾರಿಗಾಗಿ ಈ ಹಿಂದೆ ಶಿರಪೂರ ಮಾದರಿ ಹೆಸರಿನಲ್ಲಿ 20 ಕೋಟಿ ಲೂಟಿ ಮಾಡಿರುತ್ತಾರೆ ಈಗ ಮತ್ತೆ ಅದೇ ಗ್ರಾಮಗಳಲ್ಲಿ ಅದೇ ನಾಲಾಗಳಲ್ಲಿ ಹೂಳೆತ್ತಿರುವುದಾಗಿ ಸುಳ್ಳು ದಾಖಲೆಗಳನ್ನು ತಯಾರಿಸಿ ಸರ್ಕಾರದ ಹಣ ಲೂಟಿ ಮಾಡಿರುತ್ತಾರೆ. ಒಂದು ಕೆರೆ ಕಟ್ಟಿಸಿದರೆ ನೂರಾರು ವರ್ಷ ಉಳಿತಿತ್ತು. ಆಳಂದ ತಾಲೂಕಿನ ಕವಲಗಾ ಗ್ರಾಮದಲ್ಲಿ ಕೆರೆ ನಿರ್ಮಾಣಕ್ಕಾಗಿ ರೂಪಾಯಿ 16 ಕೋಟಿ ಮಂಜೂರು ಮಾಡಲಾಗಿತ್ತು. ಬಿ ಆರ್ ಪಾಟೀಲ್ ಮತ್ತು ಆರ್ ಕೆ ಪಾಟೀಲರು ಈ ಹಣ ಲೂಟಿ ಮಾಡಲೆಂದು ಕವಲಗಾ ಕೆರೆಗೆ ಮಂಜೂರಾದ ಹಣವನ್ನು ಕಾಮಗಾರಿ ಬದಲಾವಣೆ ಮಾಡಿ ನಾಲಾ ಹೂಳೆತ್ತುವಂತೆ ನಾಟಕವಾಡಿ ಸರ್ಕಾರದ 20 ಕೋಟಿ ಹಣ ಹಗಲು ದರೋಡೆ ಮಾಡಿರುತ್ತಾರೆ. ಅದರಂತೆ ಧಂಗಾಪೂರ ಕೆರೆ ಅಭಿವೃದ್ಧಿಗೆ 50 ಲಕ್ಷ, ತಡೋಳಾ ಜಿನುಗು ಕೆರೆ ಅಭಿವೃದ್ಧಿಗೆ 50 ಲಕ್ಷ ಮತ್ತು ವೈಜಾಪೂರ ಕೆರೆ ಅಭಿವೃದ್ಧಿಗೆ 78 ಲಕ್ಷ ಒಟ್ಟು ಒಟ್ಟು 178. 47 ಲಕ್ಷ ಅನುದಾನ ಮೀಸಲಿಡಲಾಗಿತ್ತು. ಈ ಕೆರೆಗಳು ಅಭಿವೃದ್ಧಿ ಆಗಿದ್ದರೆ ನೂರಾರು ವರ್ಷ ನೀರು ನಿಲ್ಲಿಸಬಹುದಾಗಿತ್ತು. ಆದರೆ ಬಿ ಆರ್ ಪಾಟೀಲ್ ಮತ್ತು ಆರ್ ಕೆ ಪಾಟೀಲರು ಸರ್ಕಾರದ ಹಣ ಲೂಟಿ ಮಾಡಲೆಂದು ಕಾಮಗಾರಿ ಬದಲಾವಣೆ ಮಾಡಿ ಸಾವಳೇಶ್ವರ ಗ್ರಾಮದಲ್ಲಿ ನಾಲಾ ಹೂಳೆತ್ತುವ ಹೆಸರಿನಿಂದ ಒಟ್ಟು 1.78 ಕೋ. ರೂ. ಲಪಟಾಯಿಸಿಲೆಂದೇ ಧಂಗಾಪೂರ, ತಡೋಳಾ ಮತ್ತು ವೈಜಾಪೂರ ಕೆರೆಗಳ ಅಭಿವೃದ್ಧಿಗಾಗಿ ಮಂಜೂರಾಗಿರುವುದನ್ನು ಬದಲಾವಣೆ ಮಾಡಿರುತ್ತಾರೆ ಎಂದು ದೂರಿದರು.

ತಪ್ಪು ಮಾಡಿರುವ, ಸುಳ್ಳು ದಾಖಲೆಗಳನ್ನು ತಯಾರಿಸಿರುವ ಮತ್ತು ಇದಕ್ಕೆ ಸಹಕರಿಸಿರುವ ಮೇಲಾಧಿಕಾರಿಗಳ ವಿರುದ್ಧ ಉಗ್ರ ಕಾನೂನು ಕ್ರಮ ಜರುಗಿಸಿ ಸಾರ್ವಜನಿಕರಿಗೆ ನ್ಯಾಯ ದೊರಕಿಸಿ ಕೊಡಬೇಕು ಇಲ್ಲದಿದ್ದರೇ ವಿಭಾಗೀಯ ಕಚೇರಿಯ ಮುಂದೆ ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆಳಂದ ಮಂಡಲ ಮಾಜಿ ಅಧ್ಯಕ್ಷ ಆನಂದರಾವ ಪಾಟೀಲ ಕೋರಳ್ಳಿ, ಪುರಸಭೆ ಸದಸ್ಯ ಶಿವಪುತ್ರ ನಡಗೇರಿ, ಜಿಲ್ಲಾ ಬಿಜೆಪಿ ಮುಖಂಡ ಸಂತೋಷ ಹಾದಿಮನಿ ಇದ್ದರು.

# ಹಿರಿಯ ಪತ್ರಕರ್ತ ಕೆ.ವಿಕ್ರಮ್ ರಾವ್ ಅವರಿಗೆ ಕೆಯುಡಬ್ಲ್ಯೂಜೆ ನುಡಿನಮನ

**ಬೆಂಗಳೂರು,ಮೇ.15–** ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟಕ್ಕೆ ಸುಧೀರ್ಘ ಅವಧಿಗೆ ಅಧ್ಯಕ್ಷರಾಗಿ, ಕ್ರಿಯಾಶೀಲ ಸಂಘಟಕರಾಗಿ ಸೇವೆ ಸಲ್ಲಿಸಿದ್ದ ಕೆ.ವಿಕ್ರಮರಾವ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸಂಘದ ಅಧ್ಯಕ್ಷರಾದ ಶಿವಾನಂದ ತಗಡೂರು,




ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಬೆಂಗಳೂರು ಘಟಕದ ಸತ್ಯನಾರಾಯಣ, ನರೇಂದ್ರ ಪಾರಿಕಟ್, ದೇವರಾಜ್, ಹಿರಿಯ ಪತ್ರಕರ್ತರಾದ ರಾಯಚೂರು ವೆಂಕಟಸಿಂಗ್, ಚನ್ನಬಸವ ಬಾಗಲವಾಡ , ಯಾದಗಿರಿ ಸಂಜೀವ ರಾವ್ ಕುಲಕರ್ಣಿ, ಸ್ತ್ರೀಜಾಗೃತಿ ಶೋಭಾ, ಶಶಿಕಲಾ, ಬೆಂಗಳೂರು ಪ್ರೆಸ್ ಕ್ಲಬ್ ಖಜಾಂಚಿ ಶರಣು,ಶಂಭುಲಿಂಗ ಮತ್ತಿತರರು ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಯುವ ಮಾರ್ಗ



# ಭಾರತದ 52ನೇ ಮುಖ್ಯ ನ್ಯಾಯಮೂರ್ತಿಯಾಗಿ ಭೂಷಣ್ ರಾಮಕೃಷ್ಣ ಗವಾಯಿ ಪ್ರಮಾಣ

**ನವದೆಹಲಿ, ಮೇ 15:** ನ್ಯಾಯವಾದಿ ಭೂಷಣ್ ರಾಮಕೃಷ್ಣ ಗವಾಯಿ ಅವರು ಇಂದು ಭಾರತದ 52ನೇ ಮುಖ್ಯ ನ್ಯಾಯಮೂರ್ತಿ ಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ರಾಷ್ಟ್ರಪತಿ ಭವನದಲ್ಲಿ ನಡೆದ ಸರಳ ಕಾರ್ಯ ಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಗವಾಯಿ ಅವರಿಗೆ ಪ್ರಮಾಣ ವಚನ ಬೋಧಿಸಿದರು.



ಹಾಲಿ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ನಿನ್ನೆ ನಿವೃತ್ತರಾಗಿದ್ದು, ಅವರ ಸ್ಥಾನವನ್ನು ಗವಾಯಿ ಅವರು ತುಂಬಿದ್ದಾರೆ. 2019 ರ ಮೇ 24ರಂದು ಸುಪ್ರೀಂಕೋರ್ಟ್ ನ್ಯಾಯಾಧೀಶರಾಗಿ ಆಯ್ಕೆಯಾಗಿರುವ ಗವಾಯಿ ಅವರು ಆರು ತಿಂಗಳ ಹೆಚ್ಚು ಅವಧಿಯನ್ನು ಹೊಂದಿದ್ದು, ನವೆಂಬರ್ ತಿಂಗಳಿನ ವರೆಗೆ ಸುಪ್ರಿಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಲಿದ್ದಾರೆ.

# ಯುದ್ಧ ನಿಲ್ಲಿಸುವ ಭಾರತ–ಪಾಕ್ ನಿರ್ಧಾರವನ್ನು ಸ್ವಾಗತಿಸಿದ ವಿಶ್ವಸಂಸ್ಥೆ

**ವಿಶ್ವಸಂಸ್ಥೆ, ಮೇ 15:** ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧವನ್ನು ಕೊನೆಗೊಳಿಸಲು ಒಪ್ಪಂದಕ್ಕೆ ಬಂದಿರುವುದರಿಂದ, ನಾವು ಉತ್ತಮ ಸ್ಥಳದಲ್ಲಿದ್ದೇವೆ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರ ವಕ್ತಾರರು ಹೇಳಿದ್ದಾರೆ.

ಉಭಯ ದೇಶಗಳು ತಮ್ಮ ಮಹೋನ್ನತ ಸಮಸ್ಯೆಗಳನ್ನು ನಿಭಾಯಿಸಲು ಇದನ್ನು ಬಳಸುತ್ತವೆ ಎಂದು ಆಶಿಸುತ್ತಿದ್ದಾರೆ.ನಾಲ್ಕು ದಿನಗಳ ತೀವ್ರವಾದ ಗಡಿಯಾಚೆಗಿನ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ನಂತರ ಸಂಘರ್ಷವನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಒಪ್ಪಂದಕ್ಕೆ ಬಂದಿವೆ.

ಕದನ ವಿರಾಮ ಮುಂದುವರೆದಿದೆ. ನಾವು ಮೊದಲಿಗಿಂತ ಉತ್ತಮ ಸ್ಥಾನದಲ್ಲಿದ್ದೇವೆ ಎಂದು ನಾನು ಭಾವಿಸುತ್ತೇನೆ. ಕದನ ವಿರಾಮ ಮುಂದುವರಿಯುತ್ತದೆ ಎಂದು ನಾವು ಭಾವಿಸುತ್ತೇವೆ ಮತ್ತು ಪಕ್ಷಗಳು ತಮ್ಮ ನಡುವಿನ ಬಾಕಿ ಇರುವ ಹಲವಾರು ಸಮಸ್ಯೆಗಳನ್ನು ನಿಭಾಯಿಸಲು ಇದನ್ನು ಬಳಸುತ್ತವೆ ಎಂದು ನಾವು ಭಾವಿಸುತ್ತೇವೆ ಎಂದು ಪ್ರಧಾನ ಕಾರ್ಯದರ್ಶಿಗಳ ವಕ್ತಾರ ಸ್ಟೀಫನ್ ಡುಜಾರಿಕ್ ದೈನಂದಿನ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ನಡೆದ 26 ಜನರ ಸಾವಿಗೆ ಪ್ರತಿಕ್ರಿಯೆಯಾಗಿ ಭಾರತವು ಮೇ 7 ರ ಆರಂಭದಲ್ಲಿ ಭಯೋತ್ಪಾದಕ ಮೂಲಸೌಕರ್ಯದ ಮೇಲೆ ಅಪರೇಷನ್



ಸಿಂದೂರ್ ಅಡಿಯಲ್ಲಿ ನಿಖರವಾದ ದಾಳಿಗಳನ್ನು ನಡೆಸಿತು.

ಭಾರತದ ಕ್ರಮದ ನಂತರ, ಪಾಕಿಸ್ತಾನವು ಮೇ 8, 9 ಮತ್ತು 10 ರಂದು ಭಾರತೀಯ ಸೇನಾ ನೆಲೆಗಳ ಮೇಲೆ ದಾಳಿ ಮಾಡಲು ಪ್ರಯತ್ನಿಸಿತು.ಈ ಒಪ್ಪಂದವನ್ನು ಘೋಷಿಸಿದ ನಂತರ, ನವದೆಹಲಿಯಲ್ಲಿರುವ ಭಾರತೀಯ ಸರ್ಕಾರಿ ಮೂಲಗಳು, ಭಾರತ ಮತ್ತು ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು ಭೂಮಿ, ವಾಯು ಮತ್ತು ಸಮುದ್ರದಲ್ಲಿ ಎಲ್ಲಾ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಲ್ಲಿಸಲು ಒಪ್ಪಂದಕ್ಕೆ ಬಂದಿದ್ದಾರೆ ಎಂದು ಸಮರ್ಥಿಸಿಕೊಂಡಿವೆ.

# UPSC ಅಧ್ಯಕ್ಷರಾಗಿ ಮಾಜಿ ರಕ್ಷಣಾ ಕಾರ್ಯದರ್ಶಿ ಅಜಯ್ ಕುಮಾರ್ ನೇಮಕ

**ನವದೆಹಲಿ,ಮೇ.15–** ಮಾಜಿ ರಕ್ಷಣಾ ಕಾರ್ಯದರ್ಶಿ ಅಜಯ್ ಕುಮಾರ್ ಅವರನ್ನು ಕೇಂದ್ರ ಸಾರ್ವಜನಿಕ ಸೇವಾ ಆಯೋಗದ (ಯುಪಿಎಸ್ಸಿ) ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಏ.29 ರಂದು ಪ್ರೀತಿ ಸುಡಾನ್ ಅವರ ಅಧಿಕಾರಾವಧಿ ಪೂರ್ಣಗೊಂಡ ನಂತರ ಯುಪಿಎಸ್ಸಿ ಅಧ್ಯಕ್ಷರ ಹುದ್ದೆ ಖಾಲಿಯಾಗಿತ್ತು.

ತೆರವಾದ ಸ್ಥಾನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಜಯ್ ಕುಮಾರ್ ಅವರ ನೇಮಕಾತಿಯನ್ನು ಅನುಮೋದಿಸಿದ್ದಾರೆ ಎಂದು ಕೇಂದ್ರ ಸಿಬ್ಬಂದಿ ಸಚಿವಾಲಯದ ಆದೇಶದಲ್ಲಿ ತಿಳಿಸಿದೆ.



## ಅಜಯ್ ಕುಮಾರ್ ಯಾರು? :

1985 ರ ಬ್ಯಾಚ್‌ನ ನಿವೃತ್ತ ಭಾರತೀಯ ಆಡಳಿತ ಸೇವೆ (ಐಎಎಸ್) ಕೇರಳ ಕೇಡರ್ ಅಧಿಕಾರಿಯಾಗಿರುವ ಅಜಯ್ ಕುಮಾರ್, ಆಗಸ್ಟ್ 23, 2019 ರಿಂದ ಅಕ್ಟೋಬರ್ 31, 2022 ರವರೆಗೆ ರಕ್ಷಣಾ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು.ರಕ್ಷಣಾ ಕಾರ್ಯದರ್ಶಿಯಾಗಿ ನಿವೃತ್ತರಾದ ಅವರು ಭಾರತದ ಅತ್ಯಂತ ಹಿರಿಯ ಅಧಿಕಾರಿಗಳಲ್ಲಿ ಒಬ್ಬರಾಗಿದ್ದರು. ರಕ್ಷಣಾ ಸಿಬ್ಬಂದಿ ಮುಖ್ಯಸ್ಥರ ರಚನೆ, ಅಗ್ನಿವೀರ್ ಯೋಜನೆ ಆತ್ಮನಿರ್ಭರ ಭಾರತ್ ಉಪಕ್ರಮಗಳು ಮತ್ತು ಆರ್ಡನೆನ್ಸ್ ಕಾರ್ಖಾನೆಗಳ ಕಾರ್ಪೊರೇಟೀಕರಣದಂತಹ ಪರಿವರ್ತನಾತ್ಮಕ ರಕ್ಷಣಾ ಸುಧಾರಣೆಗಳನ್ನು ಅವರು ಮುನ್ನಡೆಸಿದ್ದರು.

ಎಲೆಕ್ಟ್ರಾನಿಕ್ಸ್ ಮತ್ತು ಐಟಿ ಸಚಿವಾಲಯದಲ್ಲಿ ಉನ್ನತ ಅಧಿಕಾರಿಯಾಗಿ, ಪ್ರಧಾನಿ ಮೋದಿಯವರ ನೇತೃತ್ವದಲ್ಲಿ ಯುಪಿಐ, ಆಧಾರ್, ಮೈಗವ್ ಮತ್ತು ಸರ್ಕಾರಿ ಇ–ಮಾರ್ಕೆಟ್ ಪ್ಲೇಸ್ ನಂತಹ ಡಿಜಿಟಲ್ ಇಂಡಿಯಾ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದರು.

ಭಾರತದ ಎಲೆಕ್ಟ್ರಾನಿಕ್ಸ್ ಮತ್ತು ಮೊಬೈಲ್ ಉತ್ಪಾದನಾ ಉದ್ಯಮವನ್ನು ಉತ್ತೇಜಿಸುವ ಮೂಲಕ ಅವರು ರಾಷ್ಟ್ರೀಯ ಎಲೆಕ್ಟ್ರಾನಿಕ್ಸ್ ನೀತಿ 2012 ಅನ್ನು ಸಹ ರೂಪಿಸಿದ್ದರು. ಅಜಯ್ ಕುಮಾರ್ ಬಿಜೆಪಿ, ಕಾಂಗ್ರೆಸ್ ಮತ್ತು ಎಡಪಂಥೀಯ ನೇತೃತ್ವದ ಸರ್ಕಾರಗಳೊಂದಿಗೆ ಕೆಲಸ ಮಾಡಿದ ಅನುಭವ ಹೊಂದಿದ್ದಾರೆ.

ಭಾರತ ಸರ್ಕಾರ ಮತ್ತು ಕೇರಳ ಸರ್ಕಾರ ಎರಡರಲ್ಲೂ ನಿರ್ಣಾಯಕ ಹುದ್ದೆಗಳನ್ನು ಅಲಂಕರಿಸಿದ್ದರು. ಇದರಲ್ಲಿ ಕೆಲ್ಟ್ರಾನ್ನ ಪ್ರಧಾನ ಕಾರ್ಯದರ್ಶಿ ಮತ್ತು ಎಂಡಿ ಹುದ್ದೆಯೂ ಸೇರಿದೆ. ಅದನ್ನು ಪುನರುಜ್ಜೀವನಗೊಳಿಸಲು ಅವರು ಸಹಾಯ ಮಾಡಿದ್ದರು.ಮಿನ್ನೇಸೋಟ ವಿಶ್ವವಿದ್ಯಾಲಯದಿಂದ ವ್ಯವಹಾರ ಆಡಳಿತದಲ್ಲಿ ಪಿಎಚ್ಡಿ ಮತ್ತು ಅನ್ವಯಿಕ ಅರ್ಥಶಾಸ್ತ್ರದಲ್ಲಿ ಎಂಎಸ್ ಪದವಿ ಪಡೆದಿದ್ದಾರೆ, ಕೇವಲ ಮೂರು ವರ್ಷಗಳಲ್ಲಿ ಎರಡನ್ನೂ ಪೂರ್ಣಗೊಳಿಸಿದ್ದರು. ಅಲ್ಲದೆ, ಐಐಟಿ ಕಾನ್ಪುರ ಬಿಟೆಕ್ ಪದವೀಧರ ಮತ್ತು ಇಂಡಿಯನ್ ನ್ಯಾಷನಲ್ ಅಕಾಡೆಮಿ ಆಫ್ ಎಂಜಿನಿಯರ್‌ಗಳ ಫೆಲೋ ಪಡೆದಿದ್ದಾರೆ.

ಐಎಎಸ್, ಭಾರತೀಯ ವಿದೇಶಾಂಗ ಸೇವೆ (ಐಎಫ್‌ಎಸ್) ಮತ್ತು ಭಾರತೀಯ ಪೊಲೀಸ್ ಸೇವೆ (ಐಪಿಎಸ್) ಸೇರಿದಂತೆ ಇತರ ಹುದ್ದೆಗಳಿಗೆ ಅಧಿಕಾರಿಗಳನ್ನು ಆಯ್ಕೆ ಮಾಡಲು ನಾಗರಿಕ ಸೇವಾ ಪರೀಕ್ಷೆಗಳನ್ನು ನಡೆಸುವ ಯುಪಿಎಸ್ಸಿಗೆ ಒಬ್ಬ ಅಧ್ಯಕ್ಷರು ನೇತೃತ್ವ ವಹಿಸುತ್ತಾರೆ ಮತ್ತು ಗರಿಷ್ಠ 10 ಸದಸ್ಯರನ್ನು ಹೊಂದಬಹುದು. ಪ್ರಸ್ತುತ, ಆಯೋಗದಲ್ಲಿ ಇಬ್ಬರು ಸದಸ್ಯರ ಖಾಲಿ ಹುದ್ದೆ ಇದೆ. ಯುಪಿಎಸ್ಸಿ ಅಧ್ಯಕ್ಷರನ್ನು ಆರು ವರ್ಷಗಳ ಅವಧಿಗೆ ಅಥವಾ 65 ವರ್ಷ ವಯಸ್ಸಾಗುವವರೆಗೆ ನೇಮಿಸಲಾಗುತ್ತದೆ.

# ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಭದ್ರತೆ ಹೆಚ್ಚಳ

**ನವದೆಹಲಿ,ಮೇ.15–** ಕೆಲವು ಉಗ್ರಗಾಮಿ ಸಂಘಟನೆಗಳಿಂದ ಬೆದರಿಕೆ ಕರೆ ಬಂದಿರುವ ಹಿನ್ನೆಲೆಯಲ್ಲಿ ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಎಸ್ .ಜೈಶಂಕರ್ ಅವರ ಭದ್ರತೆಯನ್ನು ಹೆಚ್ಚಿಸಿದೆ. ಅವರ ಭದ್ರತಾ ವ್ಯವಸ್ಥೆಯಲ್ಲಿ ವಿಶೇಷ ಗುಂಡು ನಿರೋಧಕ ಕಾರನ್ನು ಸೇರಿಸಲಾಗಿದೆ. ದೆಹಲಿಯಲ್ಲಿರುವ ಅವರ ನಿವಾಸದ ಸುತ್ತಲೂ ಭದ್ರತಾ ಕ್ರಮಗಳನ್ನು ಸಹ ಬಿಗಿಗೊಳಿಸಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯದ ಮೂಲಗಳು ತಿಳಿಸಿವೆ.



ಜೈಶಂಕರ್ ಅವರು ಈಗಾಗಲೇ ಜಿ– ವರ್ಗದ ಭದ್ರತೆಯನ್ನು ಹೊಂದಿದ್ದು, ಇದನ್ನು ಕೇಂದ್ರ ಮೀಸಲು ಪೊಲೀಸ್ ಪಡೆ ಕಮಾಂಡೋಗಳು ಒದಗಿಸಿದ್ದಾರೆ. ಅವರ ರಕ್ಷಣೆಗಾಗಿ 33 ಕಮಾಂಡೋಗಳ ತಂಡವನ್ನು 24/7 ನಿಯೋಜಿಸಲಾಗಿದೆ. ಪಹ ಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ್ ನಂತರ ಗಡಿಯಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚಿದ ಮಿಲಿಟರಿ ಉದ್ವಿಗ್ನತೆಯ ನಡುವೆ ಕೆಲವು ಉಗ್ರಗಾಮಿ ಸಂಘಟನೆಗಳಿಂದ ಪ್ರಾಣ ಬೆದರಿಕೆ ಕರೆ ಬಂದಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಮುನ್ನೆಚ್ಚರಿಕೆಯ ಕ್ರಮವಾಗಿ ಈ ಕ್ರಮ ತೆಗೆದುಕೊಂಡಿದೆ.

ಭಾರತದಲ್ಲಿ ಮೂರನೇ ಅತ್ಯುನ್ನತ ಮಟ್ಟದ ಭದ್ರತೆಯಾದ ಜಿ– ವರ್ಗದ ಭದ್ರತೆಯಲ್ಲಿ ರಾಷ್ಟ್ರೀಯ ಭದ್ರತಾ ಸಿಬ್ಬಂದಿ ಮತ್ತು ಸ್ಥಳೀಯ ಪೊಲೀಸರ 4 ರಿಂದ 6 ಕಮಾಂಡೋಗಳು ಸೇರಿದಂತೆ 22 ಸಿಬ್ಬಂದಿ, ಕನಿಷ್ಠ ಒಂದು ಗುಂಡು ನಿರೋಧಕ ವಾಹನವೂ ಸೇರಿದೆ. ಇದು ಬೆಂಗಾವಲು ವಾಹನಗಳನ್ನು ಸಹ ಒದಗಿಸುತ್ತದೆ. ಈ ಮಟ್ಟದ ಭದ್ರತೆಯನ್ನು ಸಾಮಾನ್ಯವಾಗಿ ಉನ್ನತ ಮಟ್ಟದ ರಾಜಕಾರಣಿಗಳು ಮತ್ತು ಸೆಲೆಬ್ರಿಟಿಗಳಿಗೆ, ವಿಶೇಷವಾಗಿ ನಿರ್ದಿಷ್ಟ ಬೆದರಿಕೆಗಳನ್ನು ಎದುರಿಸುತ್ತಿರುವವರಿಗೆ ನಿಯೋಜಿಸಲಾಗುತ್ತದೆ.

ಇದಕ್ಕೂ ಮೊದಲು, ಅಕ್ಟೋಬರ್ 2023 ರಲ್ಲಿ, ಜೈಶಂಕರ್ ಅವರ ಭದ್ರತೆಯನ್ನು ಜ ನಿಂದ ಜಿ ವರ್ಗಕ್ಕೆ ಹೆಚ್ಚಳ ಮಾಡಲಾಗಿತ್ತು. ಗುಪ್ತಚರ ಬ್ಯೂರೋ ನೀಡಿದ ಬೆದರಿಕೆಯ ಮೌಲ್ಯಮಾಪನದ ಆಧಾರದ ಮೇಲೆ ಹೆಚ್ಚಳ ಮಾಡಲಾಗಿದೆ ಎಂದು ತಿಳಿದು ಬಂದಿದೆ. ಈ ಸಮಯದಲ್ಲಿ, ಭದ್ರತಾ ವಿವರಗಳ ಭಾಗವಾಗಿ, ಕೇಂದ್ರ ಸಚಿವರ ನಿವಾಸದಲ್ಲಿ 12 ಸಶಸ್ತ್ರ ಸ್ಟ್ಯಾಟಿಕ್ ಗಾರ್ಡ್‌ಗಳನ್ನು ನಿಯೋಜಿಸಲಾಗಿತ್ತು. ಜೊತೆಗೆ ಆರು ವೈಯಕ್ತಿಕ ಭದ್ರತಾ ಅಧಿಕಾರಿಗಳು, ಮೂರು ಪಾಳಿಗಳಲ್ಲಿ ನಿಯೋಜಿಸಲಾದ 12 ಸಶಸ್ತ್ರ ಬೆಂಗಾವಲು ಕಮಾಂಡೋಗಳು, ಪಾಳಿಯಲ್ಲಿ ಕೆಲಸ ಮಾಡುವ ಮೂವರು ವೀಕ್ಷಕರು ಮತ್ತು ಮೂರು ತರಬೇತಿ ಪಡೆದ ಚಾಲಕರು 24/7 ಸೇವೆ ಸಲ್ಲಿಸುತ್ತಿದ್ದರು.

# ಅಸ್ಸಾಂನಲ್ಲಿ ಮತ್ತಿಬ್ಬರು ದೇಶದ್ರೋಹಿಗಳ ಬಂಧನ



**ಗುವಾಹಟಿ, ಮೇ 15:** ಅಸ್ಸಾಂನಲ್ಲಿ ಪಾಕಿಸ್ತಾನದ ಬಗ್ಗೆ ಸಹಾನುಭೂತಿ ಹೊಂದಿದ್ದರು ಎನ್ನಲಾದ ಮತ್ತಿಬ್ಬರು ದೇಶದ್ರೋಹಿಗಳನ್ನು ಬಂಧಿಸಲಾಗಿದೆ. ಇದರೊಂದಿಗೆ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಇದುವರೆಗೆ ಒಟ್ಟು ಬಂಧನಗಳ ಸಂಖ್ಯೆ 58 ಕ್ಕೆ ತಲುಪಿದೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ.

ಬಂಧಿತ ಇಬ್ಬರೂ ವ್ಯಕ್ತಿಗಳು ಸೋನಿತ್ ಪುರ ಜಿಲ್ಲೆಯವರು ಎಂದು ಶರ್ಮಾ ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. 58 ಪಾಕ್ ಬೆಂಬಲಿಗರನ್ನು ಜೈಲಿನಲ್ಲಿ ಇರಿಸಲಾಗಿದೆ. ಅವರ ದೇಶ ವಿರೋಧಿ ಚಟುವಟಿಕೆಗಳಿಗಾಗಿ ಅವರಿಗೆ ವಿಶೇಷ ಕಾಳಜಿಯೂ ನೀಡಲಾಗುವುದು ಎಂದು ಅವರು ಹೇಳಿದರು.ದೇಶದ್ರೋಹಿಗಳ ವಿರುದ್ಧ ರಾಜ್ಯಾದ್ಯಂತ ಕಠಿಣ ಕ್ರಮ ಮುಂದುವರಿಯುತ್ತದೆ ಮತ್ತು ಯಾರನ್ನೂ ಬಿಡಲಾಗುವುದಿಲ್ಲ ಎಂದು ಶರ್ಮಾ ಹೇಳಿದರು. ಬಂಧಿತರಲ್ಲಿ ಕೆಲವರ ಮೇಲೆ ರಾಷ್ಟ್ರೀಯ ಭದ್ರತಾ ಕಾಯ್ದೆಯ (ಎನ್‌ಎಸ್‌ಎ) ನಿಬಂಧನೆಗಳನ್ನು ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಕಳೆದ ವಾರ ಇಲ್ಲಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದರು.

ಇದಕ್ಕೂ ಮೊದಲು, ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನವನ್ನು ಸಮರ್ಥಿಸಿಕೊಂಡಿದ್ದಕ್ಕಾಗಿ ಮತ್ತು ಅದರ ಸಹಭಾಗಿತ್ವಕ್ಕಾಗಿ ವಿರೋಧ ಪಕ್ಷದ ಎಐಯುಡಿಎಫ್ ಶಾಸಕ ಅಮೀನುಲ್ ಇಸ್ಲಾಂ ಅವರನ್ನು ದೇಶದ್ರೋಹದ ಆರೋಪದ ಮೇಲೆ ಬಂಧಿಸಲಾಯಿತು.ದೇಶದ ವಿರುದ್ಧ ಆಕ್ಷೇಪಾರ್ಹ ಹೇಳಿಕೆ, ಉತ್ತರ ಪ್ರದೇಶದಲ್ಲಿ ವ್ಯಕ್ತಿ ಬಂಧನ

ತನ್ನ ಫೇಸ್‌ಬುಕ್ ಖಾತೆಯಲ್ಲಿ ದೇಶದ ವಿರುದ್ಧ ಆಕ್ಷೇಪಾರ್ಹ ವಿಷಯವನ್ನು ಪೋಸ್ಟ್ ಮಾಡಿದ ಆರೋಪದ ಮೇಲೆ ಉತ್ತರ ಪ್ರದೇಶದಲ್ಲಿ ಒಬ್ಬ ವ್ಯಕ್ತಿಯನ್ನು ಬಂಧಿಸಲಾಗಿದೆ. ಆಕ್ಷೇಪಾರ್ಹ ವಿಷಯವನ್ನು ಹಂಚಿಕೊಳ್ಳುವಲ್ಲಿ ಕುರ್ಬನ್ ತ್ಯಾಗಿ ಎಂಬುವರು ಭಾಗಿಯಾಗಿರುವುದು ದೃಢಪಟ್ಟ ನಂತರ, ಆತನ ವಿರುದ್ಧ ಗಂಭೀರ ಆರೋಪಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಸರ್ಕಲ್ ಇನ್ಸ್‌ಪೆಕ್ಟರ್ ದೇವವ್ರತ್ ಬಾಜ್ ಪೈ ವರದಿಗಾರರಿಗೆ ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಇದೇ ರೀತಿಯ ಅಪರಾಧಗಳಿಗಾಗಿ ಜಿಲ್ಲೆಯಲ್ಲಿ ಬಂಧಿಸಲ್ಪಟ್ಟ ನಾಲ್ಕನೇ ವ್ಯಕ್ತಿ ತ್ಯಾಗಿಯಾಗಿದ್ದಾರೆ. ಈ ಹಿಂದೆ, ಸಾಮಾಜಿಕ ಮಾಧ್ಯಮದಲ್ಲಿ ಆಕ್ಷೇಪಾರ್ಹ ಮತ್ತು ಪಾಕಿಸ್ತಾನ ಪರವಾದ ವಿಷಯವನ್ನು ಪೋಸ್ಟ್ ಮಾಡಿದ ಆರೋಪದ ಮೇಲೆ ಕೊಟ್ವಾಲಿ, ಭೋಪಾ ಮತ್ತು ಬುಧಾನಾ ಪೊಲೀಸ್ ಠಾಣೆ ಪ್ರದೇಶಗಳಿಂದ ಮೂವರನ್ನು ಬಂಧಿಸಲಾಗಿತ್ತು.

# ಫೋನ್ ಪೇ–ಗೂಗಲ್ ಪೇಯಿಂದ ಹಣ ವರ್ಗಾಯಿಸಿಕೊಂಡು ಮೋಸ ಮಾಡಿದ 12 ಮಂದಿ ವಂಚಕರ ಬಂಧನ

**ಬೆಂಗಳೂರು,ಮೇ.15–** ಸಾರ್ವಜನಿಕರಿಂದ ಫೋನ್ ಪೇ, ಗೂಗಲ್ ಪೇ ಹಾಗೂ ಬ್ಯಾಂಕ್‌ಗಳ ಮೂಲಕ ಹಣ ವರ್ಗಾವಣೆ ಮಾಡಿಸಿಕೊಂಡು ಮೋಸ ಮಾಡುತ್ತಿದ್ದ 12 ಮಂದಿ ಅಂತಾರಾಜ್ಯ ಆರೋಪಿಗಳನ್ನು ಆಡುಗೋಡಿ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಆರೋಪಿಗಳಿಂದ 400 ಮೊಬೈಲ್ ಸಿಮ್‌ಗಳು, 140 ಎಟಿಎಂ ಕಾರ್ಡ್‌ಗಳು,17 ಚೆಕ್ ಪುಸ್ತಕಗಳು, 27 ಮೊಬೈಲ್ ಫೋನ್‌ಗಳು, 22 ವಿವಿಧ ಬ್ಯಾಂಕ್ ಪಾಸ್‌ಬುಕ್‌ಗಳು, ಆದಾಯ ಮತ್ತು ಖರ್ಚು ವೆಚ್ಚಗಳನ್ನು ನಮೂದಿಸಿರುವ ಸ್ಪೈರಲ್ ಬೈಂಡಿನ ಪುಸ್ತಕ ಮತ್ತು 15 ಸಾವಿರ ರೂ.ಹಣವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.ಎಲ್.ಆರ್. ನಗರದ ನಿವಾಸಿಯೊಬ್ಬರ ಮೊಬೈಲ್ ನಂಬರ್‌ಗೆ ಕಳೆದ ತಿಂಗಳು ಅಪರಿಚಿತ ವ್ಯಕ್ತಿಯೊಬ್ಬ ಕರೆ ಮಾಡಿ ವರ್ಕ್‌ಫ್ರಮ್ ಹೋಂ ಪ್ರಾಜೆಕ್ಟ್ ಇರುವುದಾಗಿ ಮೆಸೇಜ್ ಕಳುಹಿಸಿ ಈ ಕೆಲಸ ಮುಗಿಸಿದ್ದಲ್ಲಿ ಕಮಿಷನ್ ಹಣ ನೀಡುವುದಾಗಿ ತಿಳಿಸಿದ್ದಾನೆ.ಈ ಮೆಸೇಜ್ ನಂಬಿ ಅವರು ಹೇಳಿದ ಕೆಲಸ ಮುಗಿಸಿದಾಗ, ಪ್ರಾಜೆಕ್ಟ್ ವರ್ಕ್ ಕ್ರೆಡಿಟ್‌ಸ್ಕೋರ್ ಬ್ಯಾಲೆನ್ ಶೀಟ್ ನೆಗೆಟಿವ್ ತೋರಿಸುವುದಾಗಿ ತಿಳಿಸಿ ಹಣ ಡ್ರಾ ಮಾಡಲು ಪ್ಲಾಟ್‌ಫಾರ್ಮ್‌ನಲ್ಲಿ ರಿಜಿಸ್ಟರ್ ಮಾಡುವಂತೆ ಅಪರಿಚಿತ ವ್ಯಕ್ತಿ ಹೇಳಿದ್ದಾನೆ. ಅದರಂತೆ ರಿಜಿಸ್ಟರ್ ಮಾಡಿದ್ದು, 800 ರೂ. ಲಾಭದ ಹಣ ಖಾತೆಗೆ ಬಂದಿದೆ. ಉಳಿದ ಹಣ ಡ್ರಾಮಾಡಲು 10 ಸಾವಿರ ರೂ. ಪೇ ಮಾಡಲು ತಿಳಿಸಿದ್ದು, ಅದರಂತೆ ಆ ಹಣವನ್ನು ವರ್ಗಾವಣೆ ಮಾಡಿದ ನಂತರ 20 ಸಾವಿರ ಹಣ ಖಾತೆಗೆ ಜಮಾ ಆಗಿದೆ.

ಅಪರಿಚಿತ ವ್ಯಕ್ತಿ ಇದೇ ರೀತಿ ಆಸೆ ಹಾಗೂ ನಂಬಿಕೆ ಬರುವಂತೆ ಮಾಡಿ ಸ್ಕೋರ್ ಬ್ಯಾಲೆನ್ ಶೀಟ್‌ನಲ್ಲಿ 10,83,502 ರೂ. ಹಣ ಇರುವುದಾಗಿ ಅವರಿಗೆ ತೋರಿಸಿ, ಈ ಹಣ ನಿಮ ಖಾತೆಗೆ ಜಮಾವಾಗಬೇಕಾದರೆ 5 ಲಕ್ಷ ರೂ. ಹಣವನ್ನು ನೀಡಬೇಕೆಂದು ಹೇಳಿ ವಿವಿಧ ಬ್ಯಾಂಕ್‌ಗಳ ಖಾತೆಗಳಿಗೆ ಹಂತಹಂತವಾಗಿ 5 ಲಕ್ಷ ರೂ. ಹಣವನ್ನು ವರ್ಗಾವಣೆ ಮಾಡಿಸಿಕೊಂಡಿದ್ದಾನೆ.ತದನಂತರದಲ್ಲಿ ಅಪರಿಚಿತ ವ್ಯಕ್ತಿ ಇನ್ನೂ ಹೆಚ್ಚಿನ ಹಣ 3.24 ಲಕ್ಷ ರೂ. ಹಣ ಜಮಾ ಮಾಡಲು ತಿಳಿಸಿದಾಗ ಅನುಮಾನಗೊಂಡು ಅವರು ಆಡುಗೋಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಹಲವು ಆಯಾಮಗಳಲ್ಲಿ ಮಾಹಿತಿಗಳನ್ನು ಕಲೆಹಾಕಿ ಹಣ ವರ್ಗಾವಣೆಯಾಗಿದ್ದ ಫೆಡರಲ್ ಬ್ಯಾಂಕ್, ಉತ್ತರಪ್ರದೇಶ ಶಾಖೆಯ ಕೆವೈಸಿ ವಿವರಗಳನ್ನು ಪಡೆದು ಖಾತೆದಾರರಿಗೆ ನೋಟೀಸ್ ಜಾರಿ ಮಾಡಿದ್ದಾರೆ.

ಫೆಡರಲ್ ಬ್ಯಾಂಕಿನ ಖಾತೆದಾರನು ನೋಟೀಸ್‌ನೊಂದಿಗೆ ಠಾಣೆಗೆ ಹಾಜರಾಗಿ ಅದು ತನ್ನದೇ ಖಾತೆ ಎಂದು ಹೇಳಿದ್ದು, ಈ ಬ್ಯಾಂಕಿನ ಖಾತೆಯನ್ನು ಮುಂಬೈನಲ್ಲಿರುವ ಲೇಬರ್ ಕಾಂಟ್ರ್ಯಾಕ್ಟ್‌ನ ಮಾಲೀಕನು ತೆರೆಸಿದ್ದಾಗಿ ಈ ಖಾತೆಯ ಪಾಸ್‌ಬುಕ್, ಎಟಿಎಂ ಕಾರ್ಡ್,ಸಿಮ್ ಕಾರ್ಡ್ ಆತನ ಬಳಿಯಲ್ಲಿಯೇ ಇಟ್ಟುಕೊಂಡಿರುವುದಾಗಿ ಹೇಳಿದ್ದಾನೆ. ಹಾಗಾಗಿ ಈ ಬ್ಯಾಂಕ್‌ನ ಖಾತೆಯನ್ನು ಲೀನ್‌ಮಾರ್ಕ್ ಮಾಡಿಸಲಾಗಿರುತ್ತದೆ. ತನಿಖೆಯನ್ನು ಮುಂದುವರೆಸಿದ ಪೊಲೀಸರು ಫೆಡರಲ್ ಬ್ಯಾಂಕ್‌ನ ಖಾತೆದಾರನೊಂದಿಗೆ ಮುಂಬೈಗೆ ತೆರಳಿ ಲೇಬರ್ ಕಾಂಟ್ರ್ಯಾಕ್ಟ್ ಕೆಲಸ ಮಾಡಿಕೊಂಡಿದ್ದ ಮಾಲೀಕನನ್ನು ವಶಕ್ಕೆ ಪಡೆದು, ವಿಚಾರಣೆಗೆ ಒಳಪಡಿಸಿ ಲೇಬರ್ ಕಾಂಟ್ರ್ಯಾಕ್ಟ್ ಕೆಲಸ ಮಾಡುವ ವ್ಯಕ್ತಿಗಳಿಂದ ಬ್ಯಾಂಕ್ ಖಾತೆಗಳನ್ನು ತೆರೆಸಿ ಉತ್ತರ ಪ್ರದೇಶದಲ್ಲಿರುವ ಮೂವರು ವ್ಯಕ್ತಿಗಳಿಗೆ ಖಾತೆಯ ಪಾಸ್‌ಬುಕ್, ಎಟಿಎಂ ಕಾರ್ಡ್ ಮತ್ತು ಸಿಮ್ ಕಾರ್ಡ್‌ಗಳನ್ನು ನೀಡಿದ್ದಾಗಿ ತಿಳಿಸಿದ್ದು, ಅದಕ್ಕಾಗಿ ಅವರು ಒಂದು ಖಾತೆಗೆ 1500 ರೂ.ಕಮಿಷನ್ ನೀಡುತ್ತಿದ್ದರೆಂದು ಹಾಗೂ ಇದೇ ರೀತಿ 22 ಖಾತೆಗಳ ದಾಖಲಾತಿಗಳನ್ನು ನೀಡಿದ್ದು, ಕಮಿಷನ್ ಹಣವನ್ನು ಪಡೆದಿರುವುದಾಗಿ ತಿಳಿಸಿದ್ದಾನೆ.ಈ ಮಾಹಿತಿಗಳನ್ವಯ ತನಿಖೆಯನ್ನು ಮುಂದುವರೆಸಿದ ಪೊಲೀಸರು, ಮುಂಬೈನಲ್ಲಿ ಕಮಿಷನ್ ಪಡೆದ ಆರೋಪಿಯೊಂದಿಗೆ ಉತ್ತರಪ್ರದೇಶಕ್ಕೆ ತೆರಳಿ ಅಲ್ಲಿ ವ್ಯಕ್ತಿಯೊಬ್ಬನನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಈ ಪ್ರಕರಣದಲ್ಲಿ ಭಾಗಿಯಾಗಿರುದಲ್ಲದೇ ತನ್ನೊಂದಿಗೆ ಇತರೆ ಸ್ನೆಹಿತರುಗಳೂ ಭಾಗಿಯಾಗಿರುವುದಾಗಿ ಹೇಳಿದ್ದಾನೆ.

ಈ ಪ್ರಕರಣದಲ್ಲಿ ತನಗೆ ರಾಷ್ಟ್ರೀಕೃತ ಬ್ಯಾಂಕ್ ಖಾತೆಯ ದಾಖಲಾತಿಗಳನ್ನು ನೀಡಿದಲ್ಲಿ 18 ರಿಂದ 20 ಸಾವಿರ ಕಮಿಷನ್ ಹಣ ಪಡೆಯುತ್ತಿದ್ದುದ್ದಾಗಿ, ಲೋಕಲ್ ಬ್ಯಾಂಕ್ ಖಾತೆಯಾಗಿದ್ದಲ್ಲಿ 3 ಸಾವಿರ ರೂ. ಕಮಿಷನ್ ಪಡೆದುಕೊಂಡಿರುವುದಾಗಿ ತಿಳಿಸಿದ್ದಾನೆ. ತನಿಖೆ ಮುಂದುವರೆಸಿದ ಪೊಲೀಸರು, ಮುಂಬೈನಲ್ಲಿ ಕಮಿಷನ್ ಪಡೆಯುತ್ತಿದ್ದ ಆರೋಪಿಯೊಂದಿಗೆ ವಾರಾಣಸಿಯ ಪ್ರಯಾಗ್‌ರಾಜ್‌ಗೆ ತೆರಳಿ ಅಲ್ಲಿನ ಕಮಲಾನಗರದ ಬಾಡಿಗೆ ಮನೆಯೊಂದರಲ್ಲಿ ವಾಸವಾಗಿದ್ದ ಹತ್ತು ಮಂದಿಯನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಈ ಪ್ರಕರಣದಲ್ಲಿ ಭಾಗಿಯಾಗಿರುವುದು ಗೊತ್ತಾಗಿದೆ. ಒಟ್ಟಾರೆ ಈ ಪ್ರಕರಣದಲ್ಲಿ ಭಾಗಿಯಾಗಿದ್ದ 12 ಮಂದಿ ಆರೋಪಿಗಳನ್ನು ಬಂಧಿಸುವಲ್ಲಿ ಇನ್‌ಸ್ಪೆಕ್ಟರ್ ರವಿಕುಮಾರ್ ಮತ್ತು ಸಿಬ್ಬಂದಿ ಯಶಸ್ವಿಯಾಗಿರುತ್ತಾರೆ.

ಯುವ ಮಾರ್ಗ




# ಚರಂಡಿ ಸ್ವಚ್ಛತೆಗೆ ನಿವಾಸಿಗಳು ಒತ್ತಾಯ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.15–** ಪಟ್ಟಣದ ವಾರ್ಡ್ 12 ಗೌಳಿಪುರದ ಚರಂಡಿಗಳು ತುಂಬಿ ಮನೆಗಳಿಗೆ ನೀರು ನುಗ್ಗಿ ದುರ್ವಾಸನೆ ಬೀರುತ್ತಿದ್ದು, ಕೂಡಲೇ ಚರಂಡಿಯನ್ನು ಸ್ವಚ್ಛಗೊಳಿಸಬೇಕೆಂದು ಒತ್ತಾಯಿಸಿ ವಾರ್ಡ್ ನಿವಾಸಿಗಳು ಪುರಸಭೆಗೆ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಿದರು. ಪ್ರತಿವರ್ಷ ಚರಂಡಿಯನ್ನು ಸ್ವಚ್ಛಗೊಳಿಸಲಾಗುತಿತ್ತು. ಆದರೆ ಈ ಬಾರಿ ವರ್ಷ ಕಳೆದರು ಚರಂಡಿಯನ್ನು ಸ್ವಚ್ಛಗೊಳಿಸದ ಪರಿಣಾಮ ಮಂಗಳವಾರ ಸುರಿದ ಭಾರಿ ಮಳೆಗೆ ಚರಂಡಿಯ ನೀರು ವಾರ್ಡ್ನಲ್ಲಿರುವ ಮನೆಗಳಿಗೆಲ್ಲ ನುಗ್ಗಿ ವಾರ್ಡ್ ನಿವಾಸಿಗಳು ಸಂಕಷ್ಟ ಅನುಭವಿಸಿದರು. ಅಲ್ಲದೇ ಕೆಲವರು ಚರಂಡಿಯನ್ನು ಅತಿಕ್ರಮಿಸಿಕೊಂಡು ಚರಂಡಿಯ ಮೇಲೆ ಮನೆಗಳನ್ನು ನಿರ್ಮಾಣ ಮಾಡಿದ್ದಾರೆ. ಇದರಿಂದ ಚರಂಡಿ ನೀರು ಸರಾಗವಾಗಿ ಹರಿಯದೇ ಮನೆಗಳಿಗೆ ನುಗ್ಗುತ್ತಿವೆ. ಕೂಡಲೇ ವಾರ್ಡ್ 12 ರಲ್ಲಿರುವ ಚರಂಡಿಗಳನ್ನು ಸ್ವಚ್ಛಗೊಳಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ವಾರ್ಡ್ ನಿವಾಸಿಗಳಾದ ರಮ್ಮುಗೌಳಿ, ಮೊಹ್ಮದ್‌ಗೌಳಿ, ಚೋಟು ಸಾಬ, ಮೌಲಾಬಿ, ಹಸೀನಾ ಬೇಗಂ, ಚಾಂದಬೀ ಸೇರಿ ದಂತೆ ಇತರರು ಇದ್ದರು.

# ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ ಮಾಡುವಂತೆ ಪ್ರಧಾನಿಗೆ ಮನವಿ




ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.15–** ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿಯ ಮಾನ್ವಿ ತಾಲೂಕು ಸಮಿತಿಯ ವತಿಯಿಂದ ಪ್ರಧಾನ ಮಂತ್ರಿಗಳಿಗೆ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ರವರ ಮೂಲಕ ಮನವಿ ಸಲ್ಲಿಸಿ ರಾಯಚೂರು ಜಿಲ್ಲಾ ಏಮ್ಸ್ ಹೋರಾಟ ಸಮಿತಿಯ ಮಾನ್ವಿ ತಾಲೂಕು ಸಮಿತಿಯ ಸಂಚಾಲಕರಾದ ಮನೋಜ್ ಕುಮಾರ ಮಿಶ್ರ ಮಾತನಾಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 371 ಜೆ ವಿಶೇಷ ಸ್ಥಾನಮಾನ ಪಡೆದ ಅತ್ಯಂತ ಹಿಂದುಳಿದಿರುವ ಜಿಲ್ಲೆಯಾದ ರಾಯಚೂರು ಜಿಲ್ಲೆಯ ಅಭಿವೃದ್ದಿಗಾಗಿ ಹಾಗೂ ಈ ಭಾಗದ ಜನರಿಗೆ ಉತ್ತಮ ಆರೋಗ್ಯ ಸೌಲಭ್ಯಗಳು ದೊರೆಯಬೇಕು ಎನ್ನುವ ಉದ್ದೇಶದಿಂದ ರಾಯಚೂರು ನಗರದಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯನ್ನು ಸ್ಥಾಪಿಸುವಂತೆ ಕಳೆದ ಮೂರು ವರ್ಷಗಳಿಂದ ನಿರಂತರವಾಗಿ ಹೋರಾಟ ನಡೆಸಲಾಗುತ್ತಿದೆ ರಾಜ್ಯ ಸರ್ಕಾರವು ಎರಡು ಬಾರಿ ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ ಮಾಡುವಂತೆ ಪತ್ರ ಬರೆದರು ಕೂಡ ಇದುವರೆಗೂ ಕೇಂದ್ರ ಸರ್ಕಾರವು ಸ್ಪಂದಿಸುತ್ತಿಲ್ಲ ಹೋರಾಟವು ನಾಲ್ಕನೇ ವರ್ಷಕ್ಕೆ ಸಾಗಿದ್ದರು ಕೂಡ ಯಾವುದೇ ಪ್ರತಿಕ್ರಿಯೇ ಇಲ್ಲದಂತಾಗಿದೆ ಕೇಂದ್ರದ ಹಲವು ಮಹಾತ್ವದ ಯೋಜನೆಗಳು ಹುಬ್ಬಳಿಯ ಪಾಲಗಿವೇ ಕೇಂದ್ರ ಸರ್ಕಾರ ಏಮ್ಸ್ ಸ್ಥಾಪನೆ ಮಾಡುವವರೆಗೂ ರಾಯಚೂರಿನಲ್ಲಿ ನಡೆಯುವ ಹೋರಾಟಕ್ಕೆ ನಮ್ಮ ತಾಲೂಕಿನಂದ ಬೆಂಬಲ ನೀಡಲಾಗುವುದು ಎಂದು ತಿಳಿಸಿದರು.

ಹೆಚ್.ಶರ್ಫುದ್ದಿನ್ ಪೋತ್ನಾಳ್ ,ರಾಜಾ ಸುಭಾಷಚಂದ್ರನಾಯಕ, ರಾಜು ತಾಳಿಕೋಟಿ ,ಮನೋಜ್ ಕುಮಾರ ಮಿಶ್ರಾ, ಅನಿಲ್ ಕುಮಾರ.ಹೆಚ್, ಮುಖಿಮ್,ಭೀಮರಾಯ ಸೀತಿಮನ, ಶಿವುಕುಮಾರ ನಾಯಕ, ನವೀನ್ ಕುಮಾರ್, ಸರ್ವೋದಯ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಪಾಕ್ ನಿಂದ ಬಿಎಸ್ಎಫ್ ಯೋಧನ ಹಸ್ತಾಂತರ



**ಅಮೃತಸರ, ಮೇ 15–** ಕಳೆದ ಏಪ್ರಿಲ್ 23 ರಂದು ಆಕಸ್ಮಿಕವಾಗಿ ಅಂತಾರಾಷ್ಟ್ರೀಯ ಗಡಿರೇಖೆ ದಾಟಿದ್ದ ಭಾರತ ಯೋಧನನ್ನು ಬಂಧಿಸಿದ್ದ ಪಾಕ್ ಸೇನೆ ಇಂದು ಆ ಯೋಧನನ್ನು ಬಿಡುಗಡೆ ಮಾಡಿ ಭಾರತಕ್ಕೆ ಹಸ್ತಾಂತರಿಸಿದೆ.

ಪಾಕ್ ಸೇನೆಯಿಂದ ಬಂಧಿತರಾಗಿದ್ದ ಬಿಎಸ್ಎಫ್ ಯೋಧ ಪೂರ್ಣಮ್‌ಸಾಹು ರವರನ್ನು ಪಾಕಿಸ್ತಾನ ಪಂಜಾಬ್‌ನ ಅಟ್ಟಾರಿ–ವಾಘ ಗಡಿ ಮುಂಭಾಗದ ಮೂಲಕ ಭಾರತಕ್ಕೆ ಹಸ್ತಾಂತರಿಸಿದೆ ಎಂದು ಸೇನಾ ಪಡೆಗಳು ತಿಳಿಸಿವೆ.

ಇಂದು ಬೆಳಿಗ್ಗೆ 10.30ಕ್ಕೆ ಪಾಕಿಸ್ತಾನದ ರೇಂಜರ್‌ಗಳು ಸಾಹು ರವರನ್ನು ಬಿಎಸ್ಎಫ್ ಅಧಿಕಾರಿಗಳಿಗೆ ಒಪ್ಪಿಸಿದ್ದಾರೆ. ಈ ಹಸ್ತಾಂತರ ಶಾಂತಿಯುತವಾಗಿ ಶಿಷ್ಟಾಚಾರಗಳಿಗೆ ಅನುಸಾರವಾಗಿ ನಡೆಯಿತು ಎಂದು ಬಿಎಸ್ಎಫ್ ವಕ್ತಾರರು ತಿಳಿಸಿದ್ದಾರೆ.

ಕಳೆದ ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ಉಗ್ರರು ನಾಗರಿಕರ ಮೇಲೆ ದಾಳಿ ನಡೆಸಿ 26 ನಾಗರಿಕರನ್ನು ಹತ್ಯೆ ಮಾಡಿದ ನಂತರ ಏಪ್ರಿಲ್ 23 ರಂದು ಫಿರೋಜ್‌ಪುರ ಜಿಲ್ಲೆಯ ಭಾರತ–ಪಾಕಿಸ್ತಾನ ಅಂತಾರಾಷ್ಟ್ರೀಯ ಗಡಿರೇಖೆಯನ್ನು ಸಾಹು ಆಕಸ್ಮಿಕವಾಗಿ ದಾಟಿದ್ದರು. ಗಡಿರೇಖೆ ದಾಟಿದ ಸಾಹುರವರನ್ನು ಪಾಕಿಸ್ತಾನ ಸೇನೆ ಬಂಧಿಸಿತ್ತು.

ಯೋಧನ ಬಿಡುಗಡೆ ಸಂಬಂಧ ಭಾರತ ಮತ್ತು ಪಾಕ್ ಸೇನೆಗಳ ಸೇನಾಧಿಕಾರಿಗಳು ಮಾತುಕತೆ ನಡೆಸಿದ್ದರು. ಈ ಮಾತುಕತೆ ನಂತರ ಪಾಕಿಸ್ತಾನ ಭಾರತೀಯ ಯೋಧನನ್ನು ಬಿಡುಗಡೆ ಮಾಡಿದೆ.

ಪಶ್ಚಿಮ ಬಂಗಳಾದ ಗೂಗ್ಲಿ ಜಿಲ್ಲೆಯ ಗ್ರಾಮದ ರಿಪ್ರಾಂನಲ್ಲಿ ಪೂರ್ಣಮ್‌ಸಾಹು ಕುಟುಂಬ ವಾಸಿಸುತ್ತಿದೆ.

# ಗೂಡ್ಸ್ ರೈಲು ಬಡಿದು ಇಬ್ಬರು ಮೃತ: ವಾರಸುದಾರರ ಪತ್ತೆಗೆ ಮನವಿ

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.15–** ಚೇಗುಂಟ ಮತ್ತು ಸೈದಾಪೂರ ರೈಲ್ವೇ ನಿಲ್ದಾಣ ಮಧ್ಯೆ ರೈಲ್ವೆ ಕೀ.ಮೀ ನಂ 601/10–14 ನೇ ದ್ದರ ಡೌನ್ ರೈಲ್ವೆ ಹಳಿಗಳಲ್ಲಿ ಅಂದಾಜು 25 ವಯೋಮಾನದ ಅಪರಿಚಿತ ಗಂಡಸು ಹಾಗೂ 40 ವಯೋಮಾನದ ಹೆಂಗಸು ಇಬ್ಬರು ಚಲಿಸಿಕೊಂಡು ಹೋಗುತ್ತಿರುವಾಗ ಗೂಡ್ಸ್ ರೈಲು ಗಾಡಿಗೆ ಬಡಿದು ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ:34/2025 ಕಲಂ 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಾಗಿದೆ.

**ಗಂಡಸಿನ ಚಹರೆ ಪಟ್ಟಿ:** ವಯಸ್ಸು ಸುಮಾರು 25 ವರ್ಷ, ತೆಳ್ಳನೆಯ ಮೈಕಟ್ಟು, ಸಣ್ಣ ಮೂಗು, ಸಣ್ಣ ಕಿವಿಗಳು, ತಲೆಯಲ್ಲಿ ಸುಮಾರು ಎರಡು ಇಂಚು ಕಪ್ಪು ಕೂದಲು, ಸಣ್ಣ ಮೀಸೆ ಹೊಂದಿದ್ದು, ಬಲಗೈಯಲ್ಲಿ ಹಿಂದಿಯಲ್ಲಿ ಅಚ್ಚೆ ಹಾಕಿಸಿದ್ದಾನೆ. ಒಂದು ಹಸಿರು ಬಣ್ಣದ ಟಿ–ಶರ್ಟ್, ಒಂದು ನೀಲಿ ಬಣ್ಣದ ನೈಟ್ ಪ್ಯಾಂಟ್ ಧರಿಸಿದ್ದಾನೆ.

**ಹೆಂಗಸಿನ ಚಹರೆ ಪಟ್ಟಿ:** ವಯಸ್ಸು ಸುಮಾರು 40 ವರ್ಷ, ಸದೃಢ ಮೈಕಟ್ಟು, ತಲೆಯಲ್ಲಿ ಕಪ್ಪು ಬಿಳಿ ಮಿಶ್ರಿತ ಸುಮಾರು ಹತ್ತು ಇಂಚು ಕೂದಲು, ಮುಖದ ಇತರೆ ಭಾಗಗಳು ಜಜ್ಜಿ ನುಜ್ಜಾಗಿದೆ. ಒಂದು ತಿಳಿ ಹಳದಿ ಬಣ್ಣದ ಪಾಲಿಸ್ಟರ್ ಸೀರೆ, ಒಂದು ಬಿಳಿಯ ಬಣ್ಣದ ಬ್ಲೌಸ್, ಕೊರಳಲ್ಲಿ ಒಂದು ಕಪ್ಪು ದಾರ, ಹಾಗೂ ಒಂದು ಸಣ್ಣ ಪ್ಲಾಸ್ಟಿಕ್ ಗುಂಡುಗಳು ಸರಗಳನ್ನು ಧರಿಸಲಾಗಿದ್ದು, ಈ ಮೃತರ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತರ ಹೋಲಿಕೆಯ ಗಂಡಸು ಮತ್ತು ಹೆಂಗಸು ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೆ ಪೊಲೀಸ್ ಠಾಣೆಯ **ದೂರವಾಣಿ ಸಂಖ್ಯೆ:** 08532–231716 ಅಥವಾ 948080 2111, ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೆ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾನುವಾರಗಳಿಗೆ ನೀರು ಒದಗಿಸಲು ಶರಣಗೌಡ ಪಾಟೀಲ್ ಒತ್ತಾಯ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.15–** ಬಸವಸಾಗರ ಆಣೆಕಟ್ಟಿನಿಂದ ಒಂದು ದಿನದ ಮಟ್ಟಿಗೆ ಬಲದಂಡೆ ಕಾಲುವೆಗೆ ಜನ ಜಾನುವಾರುಗಳಿಗೆ ಕುಡಿಯಲು ನೀರು ಹರಿಸುವಂತೆ ರಾಯಚೂರು ಜಿಲ್ಲಾಧಿಕಾರಿಗೆ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ ಒತ್ತಾಯಿಸಿದರು.ತಾಲೂಕಿನ ಬಲದಂಡೆ ಕಾಲುವೆಯ ಕೆಳಭಾಗದ ಹಳ್ಳಿಗಳಾದ ರೋಡಲಬಂಡಾ, ಚಿಕ್ಕ ಉಪ್ಪೇರಿ, ಯರಗುಂಟಿ, ಜಲದರ್ಗ, ಸುಣಕಲ್ಲು, ಈಚನಾಳ, ಗುಂತಗೋಳ, ಗೋನವಾಟ್ಲ, ದೇವರಭೂಪುರ, ಗೌಡೂರು, ಇನ್ನಿತರ ದೊಡ್ಡಿ, ತಾಂಡಾಗಳ ಜನರಿಂದ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ಇರುವುದರಿಂದ ನನಗೆ ಮನವಿಯನ್ನು ಸಲ್ಲಿಸಿದ್ದಾರೆ. ಬಲದಂಡೆ ಕಾಲುವೆಯ ಕೆಳಭಾಗದ ಗ್ರಾಮಗಳಿಗೆ ಕನಿಷ್ಠ ಒಂದು ದಿನದ ಮಟ್ಟಿಗಾದರೂ ಕುಡಿಯಲು ನೀರು ಹರಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಬೇಕೆಂದು ಆಗ್ರಹಿಸಿದರು.

# ಆರೋಗ್ಯ ಜಾಗೃತಿ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.15–** ತಾಲೂಕಿನ ಜಿನೂರ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ ಹಾಗೂ ಆರೋಗ್ಯ ಜನಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಚಾಲನೆ ನೀಡಿ ಮಾತನಾಡಿ ಆರೋಗ್ಯ ಇಲಾಖೆಯಿಂದ ಮಕ್ಕಳಿಗೆ ವಿವಿಧ ಮಾರಕ ಕಾಯಿಲೆಗಳು ಬರದಂತೆ ತಡೆಯುವುದಕ್ಕೆ ಉಚಿತವಾಗಿ ಲಸಿಕೆಯನ್ನು ಹಾಕಲಾಗುತ್ತಿದ್ದು ತಾಯಂದಿರು ತಮ್ಮ ಹತ್ತಿರದ ಸರ್ಕಾರಿ ಆಸ್ಪತ್ರೆಗಳಲ್ಲಿ ತಮ್ಮ ಮಕ್ಕಳಿಗೆ ನಿಯಮಿತವಾಗಿ ಲಸಿಕೆಯನ್ನು ಹಾಕಿಸುವುದರಿಂದ ಮಾರಕ ಕಾಯಿಲೆಗಳಿಂದ ಮಕ್ಕಳನ್ನು ರಕ್ಷಿಸಬಹುದು. ಬಿಸಿಜಿ ಲಸಿಕೆಯನ್ನು ಕೊಡುವುದರಿಂದ ಕ್ಷಯರೋಗ ತಡೆಗಟ್ಟಬಹುದು ಹಾಗೂ ಪೆಂಟಾವೆಲೆಂಟ್ ಲಸಿಕಾ ಕೊಡಿಸುವುದರಿಂದ ಐದು ಮಾರಕ ರೋಗಗಳನ್ನು ತಡೆಗಟ್ಟಬಹುದು. ಎಮ್. ಆರ್ . ಲಸಿಕೆಯನ್ನು ಕೊಡುವುದರಿಂದ ಬೇಸಿಗೆಯಲ್ಲಿ ಮಕ್ಕಳಿಗೆ ದಡಾರ ಬರದಂತೆ ತಡೆಯಬಹುದು ಎಂದು ತಿಳಿಸಿದರು.

ಆರೋಗ್ಯ ನಿರೀಕ್ಷಣಾ ಅಧಿಕಾರಿ ಗುರುಶರಣ ಬೇಸಿಗೆಯಲ್ಲಿ ಮಕ್ಕಳಿಗೆ ಬರುವ ಕಾಯಿಲೆಗಳ ಬಗ್ಗೆ ಮಾಹಿತಿ ನೀಡಿದರು

ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿ ಕವಿತಾ. ಆರೋಗ್ಯ ನಿರೀಕ್ಷಣಾ ಅಧಿಕಾರಿ ದೇವೇಂದ್ರಪ್ಪ, ಅಂಗನವಾಡಿ ಕಾರ್ಯಕರ್ತೆಯರಾದ ರೇಣುಕಾ.ದ್ರಾಕ್ಷಾಯಿಣಿ ಸೇರಿದಂತೆ ಗ್ರಾಮದ ತಾಯಿಂದಿರು ಇದ್ದರು.

# ಶಿವಾನುಭೂತಿ, ಶಿವಮಿಲನ , ಶಿವಧ್ಯಾನ ಕಾರ್ಯಕ್ರಮ



ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ.15–** ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಓಂ.ಮಂಡಳಿ ಶಿವಶಕ್ತಿ ಅವತಾರ ಸೇವಾ ಸಂಸ್ಥಾನ ಮಾನ್ವಿ ಶಾಖೆಯ ವತಿಯಿಂದ ನಡೆದ ಶಿವಾನುಭೂತಿ, ಶಿವಮಿಲನ, ಶಿವಧ್ಯಾನ ಹಾಗೂ ವಂದೇಮಾತರಂ ಕಾರ್ಯಕ್ರಮವನ್ನು ಛತ್ತಿಸ್‌ಗಡ್ ರಾಯ್‌ಪುರ್‌ನ ಓಂ.ಮಂಡಳಿ ಶಿವಶಕ್ತಿ ಅವತಾರ ಸೇವಾ ಸಂಸ್ಥಾನ ರಾಯ್‌ಪುರ್‌ದ ಪೂಜ್ಯ ದೇವಕಿ ಅಮ್ಮನವರು ದೀಪ ಬೇಳಗಿಸಿ ಉದ್ಘಾಟಿಸಿ ಮಾತನಾಡಿ. ಕಾಲಿಯುಗದ ಅಂತ್ಯವಾಗುತ್ತಿದೆ ಸತ್ಯಯುಗದ ಕಡೆಗೆ ನಾವು ನಡೆಯುವ ಸಮಯ ಕಡಿಮೆಯಿದೆ ಸತ್ಯಯುಗದಲ್ಲಿ ಎಲ್ಲಾವು ಒಂದೆಯಾಗಿರುತ್ತದೆ ಏಕ ಬಾಷೆ,ಏಕ ಧರ್ಮ, ಏಕ ದೇವ ಉಪಸಾನೆ ನಡೆಯಲಿದೆ ಸತ್ಯಯುಗದ ನಿರ್ಮಾಣದಲ್ಲಿ ಶಿವ ಬಾಬಾರೊಂದಿಗೆ ನಾವೇಲ್ಲರು ಭಾಗಿಯಾಗ ಬೇಕಾಗಿದೆ. ಅತ್ಮ ಮತ್ತು ಪರಮಾತ್ಮನ ಬಗ್ಗೆ ತಿಳಿದುಕೊಂಡಲ್ಲಿ ಹಾಗೂ ಓಂಕಾರದ ಉಚ್ಚಾರಣೆಯಿಂದ ವಿಶ್ವದಲ್ಲಿ ಹಾಗೂ ಮನಸ್ಸಿನಲ್ಲಿ ಶಾಂತಿ ನೆಲ್ಲೆಸುತ್ತದೆ. ನಮ್ಮನ್ನು ನಾವು ಬಂಧನಲ್ಲಿಟ್ಟುಕೊಳ್ಳದೆ ಪರಮಾತ್ಮನಲ್ಲಿ ಅತ್ಮವನ್ನು ಧ್ಯಾನದ ಮೂಲಕ ಒಂದಾಗಿಸಿದಾಗ ಮಾತ್ರ ನಮ್ಮನ್ನು ನಾವು ಮುಕ್ತವಾಗಿಸಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಾಮೂಹಿಕವಾಗಿ ವಂದೇಮಾತರಂ ಗೀತಾ ಗಾಯನ ನಡೆಯಿತು.

ಓಂ.ಮಂಡಳಿ ಶಿವಶಕ್ತಿ ಅವತಾರ ಸೇವಾ ಸಂಸ್ಥಾನ ಮಾನ್ವಿ ಶಾಖೆಯ ಸಾಧಕರಾದ ಅಕ್ಕಮ್ಮ, ವಿವಿಧ ಶಾಖೆಗಳ ಸಾಧಕರಾದ ದ್ವಾರಕ, ವಿಜಯ,ನೇಹಲ್ ,ಶಿವಮ್, ಮಂಜುನಾಥ ಶಿಖರಿಪುರ, ರೇಖಾ ದೀದಿ, ಸಂಗಮ್‌ದೀದಿ, ಸೋನಿದೀ ದಿ,ರುದ್ರಪ್ಪನಾಯಕ, ಸೇರಿದಂತೆ ನೂರಾರು ಜನರು ಕಾರ್ಯಕ್ರಮದಲ್ಲಿ ಭಾಗವಹಿಸಿದರು,

# ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ದೊಡ್ಡನಗೌಡ ಆಯ್ಕೆ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.15–**ಪಟ್ಟಣದ ಪುರಸಭೆ ಸ್ಥಾಯಿ ಸಮಿತಿಯ ನೂತನ ಅಧ್ಯಕ್ಷರಾಗಿ ವಾರ್ಡ್ ನಂಬರ್ 13 ಸದಸ್ಯರಾದ ದೊಡ್ಡನಗೌಡ ಪಾಟೀಲ್ ಬುಧವಾರ ಅವಿರೋಧವಾಗಿ ಆಯ್ಕೆಯಾದರು.

# ಕಚೇರಿ ಸ್ಥಳಾಂತರ, ಮೇ 17ರಂದು ಕಚೇರಿ ಕಾರ್ಯ ಸ್ಥಗಿತ

**ರಾಯಚೂರು,ಮೇ.15–**ಇಲ್ಲಿನ ಉಪನೋಂದಣಾಧಿಕಾರಿಗಳ ಕಾರ್ಯಾಲಯವನ್ನು ನೂತನ ಜಿಲ್ಲಾಡಳಿತ ಭವನಕ್ಕೆ ಸ್ಥಳಾಂತರಗೊಳ್ಳುತ್ತಿರುವ ಕಾರಣ ಮೇ 17ರಂದು ಕಚೇರಿಯ ಕಾರ್ಯಯನ್ನು ಸ್ಥಗಿತಗೊಳ್ಳಿಸಲಾಗಿದ್ದು, ಸಾರ್ವಜನಿಕರು ಸಹಕಾರಿಸುವಂತೆ ಕೋರಲಾಗಿದೆ.

ನಗರದ ನೂತನವಾಗಿ ನಿರ್ಮಾಣವಾಗಿರುವ ಜಿಲ್ಲಾಡಳಿತ ಭವನಕ್ಕೆ ಹಿರಿಯ ಉಪನೋಂದಣಾಧಿಕಾರಿಗಳ ಕಾರ್ಯಾಲಯ ಸ್ಥಳಾಂತರಗೊಳ್ಳುತ್ತಿರುವುರಿಂದ ಕಚೇರಿಯ ದಾಖಲೆಗಳು, ಕಡತಗಳು ಮತ್ತು ಇತರ ದಾಖಲೆಗಳನ್ನು ಹಾಗೂ ಗಣಕಯಂತ್ರಗಳನ್ನು ಸಾಗಣೆ ಮಾಡಬೇಕಿರುವುದರಿಂದ ಮೇ.17ರಂದು ಕಚೇರಿಯ ಕಾರ್ಯವನ್ನು ಸ್ಥಗಿತಗೊಳಿಸಲಾಗಿದ್ದು, ಮೇ.19ರಂದು ಹಿರಿಯ ಉಪ ನೋಂದಣಾಧಿಕಾರಿಗಳ ಕಾರ್ಯಾಲಯವು ಜಿಲ್ಲಾಡಳಿತ ಭವನದಲ್ಲಿ ಕಾರ್ಯನಿರ್ವಹಣೆ ಮಾಡಲಿದೆ ಎಂದು ಹಿರಿಯ ಉಪ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ.17ರಂದು ನೇರ ಸಂದರ್ಶನ

**ರಾಯಚೂರು,ಮೇ.15–** ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆ ಕಚೇರಿಯಲ್ಲಿ ಮೇ 17ರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆವರೆಗೆ ನೇರ ಸಂದರ್ಶನ ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ನೇರ ಸಂದರ್ಶನವನ್ನು ಎರಡು ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಆಯೋಜನೆ ಮಾಡಲಾಗಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 30 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ; 08532–231684,9148115988, 8095125775ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಜಿಲ್ಲೆಯಲ್ಲಿ ಸಚಿವರಾದ ಎನ್.ಎಸ್.ಭೋಸರಾಜು ಅವರ ಪ್ರವಾಸ

**ರಾಯಚೂರು,ಮೇ.15–**ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಭೋಸರಾಜು ಅವರು ಮೇ.16 ರಿಂದ 18ರವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಮೇ 16ರ ಸಂಜೆ 5 ಗಂಟೆಗೆ ಕೊಪ್ಪಳ ಜಿಲ್ಲೆಯಿಂದ ನಿರ್ಗಮಿಸಿ, ಕುಷ್ಟಗಿ, ತಾವರಗೇರಾ, ಸಿಂಧನೂರು ಹಾಗೂ ಮಾನವಿ ಮಾರ್ಗವಾಗಿ ರಾಯಚೂರು ನಗರಕ್ಕೆ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ.

ಮೇ.17ರ ಬೆಳಿಗ್ಗೆ 10.30ಕ್ಕೆ ಜಿಲ್ಲೆಯ ಮಾನವಿ ಪಟ್ಟಣಕ್ಕೆ ಆಗಮಿಸಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

ಮೇ.18ರ ಬೆಳಿಗ್ಗೆ 10.30ಕ್ಕೆ ಮಾನವಿ ಪಟ್ಟಣದಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ನಂತರ ಮಾನವಿ ಪಟ್ಟಣದ ಸೂರ್ಯ ಫಂಕ್ಷನ್ ಹಾಲ್ ನಲ್ಲಿ ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ ಅವರ ಮೊಮ್ಮಗನ ವಿವಾಹ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ಸಂಜೆ 5 ಗಂಟೆಗೆ ಮಾನವಿಯಿಂದ ಸಿಂಧನೂರು ಮಾರ್ಗವಾಗಿ ವಿಜಯನಗರ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**